ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 165
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಮಂಗಳವಾರ: 09–06–2026

## ರಂಗೇರಿದ ಪರಿಷತ್ ಚುನಾವಣೆ: ಕೈ– ಜೆಡಿಎಸ್ ಸಮರಕ್ಕೆ ವೇದಿಕೆ

**ಬೆಂಗಳೂರು, ಜೂ. 8–** ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್‌ನ 7 ಸ್ಥಾನಗಳಿಗೆ ನಡೆಯುವ ಚುನಾವಣೆ ರಂಗೇರಿದ್ದು, ಈ ಚುನಾವಣೆಯಲ್ಲಿ ಅಭ್ಯರ್ಥಿಯಾಗಿ ಜೆಡಿಎಸ್ 8ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಈ ಮೂಲಕ ಕಾಂಗ್ರೆಸ್ ಮತ್ತು ಜೆಡಿಎಸ್ ನಡುವೆ ಮತ್ತೊಂದು ಸಮರಕ್ಕೆ ವೇದಿಕೆ ಅಣಿಯಾಗಿದೆ.

ವಿಧಾನಪರಿಷತ್‌ನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಐದು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ಬಿಜೆಪಿ ತನ್ನ ಅಧಿಕೃತ ಇಬ್ಬರು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ ,7ನೇ ಸ್ಥಾನಕ್ಕೆ ಈಗ ಕಾಂಗ್ರೆಸ್‌ನ ಐದನೇ ಅಭ್ಯರ್ಥಿ ಹಾಗೂ ಜೆಡಿಎಸ್ ಅಭ್ಯರ್ಥಿ ನಡುವೆ ಸ್ಪರ್ಧೆ ಏರ್ಪಟಿದ್ದು ಗೆಲುವು ಯಾರಿಗೆ ದಕ್ಕಲಿದೆ ಎಂಬುದು ಕುತೂಹಲ ಮೂಡಿಸಿದೆ.

ಕಾಂಗ್ರೆಸ್‌ನ ನಾಲ್ವರು ಅಭ್ಯರ್ಥಿಗಳಾದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ತಿಪ್ಪಣ್ಣ ಕಮಕನೂರು, ಪಿ.ವಿ. ಮೋಹನ್, ಶಿವಣ್ಣ ಮಳವಳ್ಳಿ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿತ್ತು. ಇವರುಗಳೆಲ್ಲಾ ಈಗಾಗಲೇ ನಾಮಪತ್ರ ಸಲ್ಲಿಸಿದ್ದರಾದರೂ ಕಾಂಗ್ರೆಸ್‌ನ ಐದನೇ ಅಭ್ಯರ್ಥಿಯಾಗಿ ಕೆಪಿಸಿಸಿ ಖಜಾಂಚಿ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಆಪ್ತ ವಿನಯ್ ಕಾರ್ತಿಕ್ ಅವರನ್ನು ಆಯ್ಕೆ ಮಾಡಲಾಗಿತ್ತು ಅವರು ಇಂದು ತಮ್ಮ ನಾಮಪತ್ರ ಸಲ್ಲಿಸಿದರು



ಬಿಜೆಪಿಯಿಂದ ವಿಧಾನಪರಿಷತ್‌ನ ಎರಡು ಸ್ಥಾನಗಳಿಗೆ ಪಕ್ಷದ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜಪಾಟೀಲ್ ಹಾಗೂ ರಘು ಕೌಟಿಲ್ಯ ಅವರನ್ನು ಆಯ್ಕೆ ಮಾಡಿದ್ದು, ಇವರಿಬ್ಬರುಇಂದು ತಮ್ಮ ನಾಮಪತ್ರ ಸಲ್ಲಿಸಿದರು.

ಈ ಮೊದಲು 8ನೇ ಅಭ್ಯರ್ಥಿಯನ್ನು ನಿಲ್ಲಿಸಲು ಅಷ್ಟೇನೂ ಆಸಕ್ತಿ ತೋರದಿದ್ದ ಜೆಡಿಎಸ್, ಕಾಂಗ್ರೆಸ್‌ನ ವಿನಯ್ ಕಾರ್ತಿಕ್ ನಾಮಪತ್ರ ಸಲ್ಲಿಸುತ್ತಿದ್ದಂತೆಯ ಜೆಡಿಎಸ್‌ನಿಂದ 8ನೇ ಅಭ್ಯರ್ಥಿಯಾಗಿ ಮಾಜಿ ವಿಧಾನಪರಿಷತ್ ಸದಸ್ಯ ಗೋವಿಂದರಾಜು ನಾಮಪತ್ರ ಸಲ್ಲಿಸಿದರು. ಹಾಗಾಗಿ ವಿಧಾನಪರಿಷತ್ ಚುನಾವಣಾ ಕಣ ರಂಗೇರಿದ್ದು, ಕಾರ್ತಿಕ್ ವಿನಯ್ ಹಾಗೂ ಗೋವಿಂದರಾಜು ನಡುವೆ ಗೆಲುವಿಗೆ ಪೈಪೋಟಿ ಇದ್ದು, ಎರಡೂ ಪಕ್ಷಗಳಿಗೂ ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ಕೆಲವು ಮತಗಳ ಅವಶ್ಯಕತೆ ಇದ್ದು, ಇದನ್ನು ಹೇಗೆ ಕ್ರೂಢೀಕರಿಸುತ್ತವೆ ಎಂಬುದು ಕುತೂಹಲ ಮೂಡಿಸಿದೆ.

ರಾಜ್ಯಸಭಾ ಚುನಾವಣೆ ಬಿಜೆಪಿ ಅಭ್ಯರ್ಥಿ ನಾಮಪತ್ರ ಸಲ್ಲಿಕೆ ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಲ್ಗಿ ಈ ತಿಂಗಳ 18 ರಂದು ನಡೆಯಲಿರುವ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಲೋಕಸೇವಾ ಆಯೋಗದ ಮಾಜಿ ಸದಸ್ಯ ಎಂ. ನಾಗರಾಜು ಇಂದು ತಮ್ಮ ನಾಪತ್ರ ಸಲ್ಲಿಸಿದರು

ಕಾಂಗ್ರೆಸ್‌ನಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ, ಎಐಸಿಸಿ ವಕ್ತಾರ ಪವನ್ ಖೇರಾ, ಹಾಗೂ ಮನ್ಸೂರ್ ಆಲಿಖಾನ್ ಇವರುಗಳು ತಮ್ಮ ನಾಮಪತ್ರ ಸಲ್ಲಿಸಿದ್ದು, ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಅವಿರೋಧ ಆಯ್ಕೆಯಾಗುವ ಸಾಧ್ಯತೆಗಳಿವೆ.

ನಾಲ್ಕು ಸ್ಥಾನಗಳಿಗೆ ಕಾಂಗ್ರೆಸ್‌ನಿಂದ ಮೂವರು, ಬಿಜೆಪಿಯಿಂದ ಒಬ್ಬರು ಹಾಗೂ ಪಕ್ಷೇತರದ ಅಭ್ಯರ್ಥಿ ಒಬ್ಬರು ನಾಮಪತ್ರ ಸಲ್ಲಿಸಿದ್ದರಾದರೂ ಪಕ್ಷೇತರ ಅಭ್ಯರ್ಥಿಗೆ ಶಾಸಕರ ಬೆಂಬಲ ಸಿಗದ ಕಾರಣ ಕಾಂಗ್ರೆಸ್‌ನ ಮಲ್ಲಿಕಾರ್ಜುನಖರ್ಗೆ, ಫವನ್ ಖೇರಾ, ಮನ್ಸೂರ್ ಆಲಿಖಾನ್ ಮತ್ತು ಬಿಜೆಪಿಯ ಎಂ. ನಾಗರಾಜು ಅವಿರೋಧವಾಗಿ ಆಯ್ಕೆಯಾಗುವುದು ಬಹುತೇಕ ನಿಶ್ಚಿತ.

## ಜಿಲ್ಲಾ ವಾಣಿಜ್ಯೋದ್ಯಮ ಸಂಘದ ವಿವಿಧ ಪದಾಧಿಕಾರಿಗಳೊಂದಿಗೆ ಉಜ್ವಲ ಕುಮಾರ್ ಘೋಷ್ ಸಭೆ



ಧೈರ್ಯದ ದಾರಿ

**ರಾಯಚೂರು ಜೂನ್ 08 :** ರಾಯಚೂರು ಜಿಲ್ಲೆಯ ವೇಗವರ್ಧಿತ ಆರ್ಥಿಕ ಬೆಳವಣಿಗೆ, ಕೈಗಾರಿಕೀಕರಣ ಮತ್ತು ಸಾಮಾಜಿಕ ಅಭಿವೃದ್ಧಿಯ ಕುರಿತು ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘದ ವಿವಿಧ ಪದಾಧಿಕಾರಿಗಳೊಂದಿಗೆ ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರಿ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರು ಸಭೆ ನಡೆಸಿದರು.

ಈ ವೇಳೆ ಜಿಲ್ಲಾ ವಾಣಿಜ್ಯೋದ್ಯಮಿಗಳ ಸಂಘದ ಎಸ್. ಕಮಲ್ ಕುಮಾರ್ ಅವರು ಮಾತನಾಡಿ, ರಾಯಚೂರಿನ ಬಹುದಿನಗಳ ಬೇಡಿಕೆಯಾದ ಐಐಐಟಿ, ಜವಳಿ ಪಾರ್ಕ್ 2ನೇಪುಟಕ್ಕೆ

## ದಿ.ರಾಜಾ ವಸಂತ ನಾಯಕ ಜನ್ಮದಿನದ ಅಂಗವಾಗಿ ಉಚಿತ ಸಸಿಗಳ ವಿತರಣೆ ಕಾರ್ಯಕ್ರಮ
## ಸಸಿ ನೆಟ್ಟು ಪರಿಸರ ಉಳಿಸೋಣ: ರಾಜಾ ಸುಭಾಷಚಂದ್ರ ನಾಯಕ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಶ್ರೀ ರಂಗನಾಥ ಪ್ರೌಢಶಾಲೆಯ ಅವರಣದಲ್ಲಿ ಆರ್.ವಿ.ಎನ್. ಗ್ರೂಪ್ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಹಾಗೂ ದಿ.ರಾಜಾ ವಸಂತ ನಾಯಕ ಜನ್ಮದಿನದ ಅಂಗವಾಗಿ ನಡೆದ ಉಚಿತ ಸಸಿಗಳ ವಿತರಣೆ ಹಾಗೂ ಪರಿಸರ ಜಾಗೃತಿ ಕಾರ್ಯಕ್ರಮವನ್ನು ದಿ.ರಾಜಾ ವಸಂತ ನಾಯಕ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ತಾಲೂಕು ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷರಾದ ರಾಜಾ ಸುಭಾಷಚಂದ್ರನಾಯಕ ಚಾಲನೆ ನೀಡಿ ಮಾತನಾಡಿ ದಿ.ರಾಜಾ ವಸಂತ ನಾಯಕರವರು ತಮ್ಮ ಜೀವನವನ್ನು ಸಮಾಜಕ್ಕಾಗಿ ಸಮರ್ಪಿಸಿಕೊಂಡಿದ್ದರು ಪ್ರತಿ ವಿಶ್ವ ಪರಿಸರ ದಿನಾಚರಣೆಯಂದು ಅವರು ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ನೀಡುವ ಮೂಲಕ ಹಸಿರಿಕರಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಿದರು.

ಅವರು ತೋರಿದ ಮಾರ್ಗದಂತೆ ಪರಿಸರ ದಿನಾಚರಣೆ ಅಂಗವಾಗಿ ಇಂದು ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಸಿಗಳನ್ನು ನೀಡುವುದರೊಂದಿಗೆ ನಮ್ಮ ಕುಟುಂಬದಿಂದ ಪಟ್ಟಣದಲ್ಲಿ ರಸ್ತೆ ಬದಿ,ಶಾಲೆಗಳ ಅವರಣ, ಸರಕಾರಿ ಸ್ಥಳಗಳಲ್ಲಿ ಸಸಿಗಳನ್ನು ನೆಟ್ಟು ಅವರಿಗೆ ನಿಜವಾದ ಗೌರವ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಟಿ.ಎ.ಪಿ.ಸಿ.ಎಂ.ಸಿ. ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವತಿ ಮಾತನಾಡಿ ದಿ.ರಾಜಾ ವಸಂತ ನಾಯಕರವರು ಪರಿಸರ ಪ್ರೇಮಿಯಾಗಿದ್ದರು ಅವರು ಪ್ರತಿ ವರ್ಷ ತಮ್ಮ ಜನ್ಮದಿನಾಚಾರಣೆಯನ್ನು ಅದ್ದೂರಿಯಾಗಿ ಆಚರಿಸಿಕೊಳ್ಳದೆ ಸಾರ್ವಜನಿಕರಿಗೆ ಸಾವಿರಾರು ಸಸಿಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಿಕೊಳ್ಳುತ್ತಿದ್ದರು ಅವರು ಪರಿಸರದ ಕೂರಿತು ಜಾಗೃತಿ ಮೂಡಿಸುವ ಅನೇಕ ಕಾರ್ಯಕ್ರಮಗಳನ್ನು ತಾಲೂಕಿನಾದ್ಯಂತ ನಡೆಸುವ ಮೂಲಕ ಹಸಿರಿಕರಣಕ್ಕೆ ಹೆಚ್ಚಿನ ಒತ್ತು ನೀಡಿದರು ಎಂದು ಸ್ಮರಿಸಿಕೊಂಡರು. ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಸಾವಿರಾರು ಸಸಿಗಳನ್ನು ವಿತರಣೆ ಮಾಡಲಾಯಿತು.


ಕಾರ್ಯಕ್ರಮದಲ್ಲಿ ಮುಸ್ಲಿಂ ಸಮುದಾಯದ ಧರ್ಮಗುರುಗಳಾದ ಸೈಯಾದ್ ಸಜ್ಜತ್ ಹುಸೇನಿ ಮತವಾಲೆ, ಶಿವರಾಜ ನಾಯಕ, ಹರಿಹರಪಾಟೀಲ್, ಮರಿಸ್ವಾಮಿ ರೌಡೂರು, ತನ್ವೀರ್ ಹಾಸನ್, ನೇತಾಜಿ ಶಿಕ್ಷಣಸಂಸ್ಥೆಯ ಅಧ್ಯಕ್ಷರಾದ ಕೆ.ಈ, ನರಸಿಂಹ,ಸೈಯಾದ್



ಖಾಲೀದ್ ಖಾದ್ರಿ, ನೀಲಪ್ಪ ಜಾನೆಕಲ್, ಚಂದ್ರಶೇಖರ ಕುರ್ಡಿ,ಸುರಾಜ್ ವಕೀಲರು, ಡಾ.ವಸಂತ,ರಾಜಾ ಶಾಮಾಸುಂದರ್ ನಾಯಕ,ರಾಜಾ ಇಂದ್ರಜೀತ್ ನಾಯಕ, ಲಕ್ಷ್ಮೀದೇವಿ ನಾಯಕ, ಜಿ,ನಾಗರಾಜ, ಸತ್ತರ ಬಂಗ್ಲೇವಾಲೆ, ಸೇರಿದಂತೆ ಇನ್ನಿತರರು ಇದ್ದರು.

## ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ: ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಲು ಸೂಚನೆ

ಧೈರ್ಯದ ದಾರಿ




**ಸಿರವಾರ, ಜೂನ್ 8:** ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಜೂನ್ 12ರಂದು ಆಚರಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಸೂಚಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಕಾರ್ಯಕ್ರಮದ ರೂಪುರೇಷೆ:** ಜೂನ್ 12ರಂದು ತಹಸೀಲ್ದಾರ್ ಕಚೇರಿಯಿಂದ ಪ್ರಾರಂಭವಾಗುವ ಜಾಗೃತಿ ಜಾಥಾದಲ್ಲಿ ವಿದ್ಯಾರ್ಥಿಗಳು ಘೋಷಣೆಗಳನ್ನು ಕೂಗುತ್ತಾ ಮುಖ್ಯ ರಸ್ತೆಯ ಮೂಲಕ ಬಸ್ ನಿಲ್ದಾಣಕ್ಕೆ ತೆರಳಲಿದ್ದಾರೆ. ನಂತರ ಬಸ್ ನಿಲ್ದಾಣದ ಮುಂಭಾಗ ಮಾನವ ಸರಪಳಿ ನಿರ್ಮಿಸಿ, ಬಾಲಕಾರ್ಮಿಕ ಪದ್ಧತಿಯ ವಿರುದ್ಧ ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುವುದು.

ಈ ಕಾರ್ಯಕ್ರಮದಲ್ಲಿ ಶಾಲಾ–ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದು, ಎಲ್ಲಾ ಇಲಾಖೆಯ ಅಧಿಕಾರಿಗಳು ತಪ್ಪದೇ ಹಾಜರಿರಬೇಕೆಂದು ನಿರ್ದೇಶನ ನೀಡಿದರು.

ಈ ಸಭೆಯಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಜಸ್‌ಪಾಲ್ ಸಿಂಗ್, ನೀರಾವರಿ ಇಲಾಖೆಯ ಎಇಇ ವಿಜಯಲಕ್ಷ್ಮಿ, ಪ್ರೊಬೇಷನರಿ ಪಿಎಸ್‌ಐ ಹನುಮಂತ್ರಾಯ, ಶಿರಸ್ತೇದಾರ ಜುಬೇರ್ ಸಾಬ್, ಕಂದಾಯ ನಿರೀಕ್ಷಕ ಶ್ರೀನಾಥ್, ಗ್ರಾಮಲೆಕ್ಕಾಧಿಕಾರಿ ವಿಲ್ಸನ್, ಎಫ್‌ಡಿಎ ಈರೇಶ, ಎಸ್‌ಡಿಎ ಅಮರ್, ಸಿಡಿಪಿಒ ಕಚೇರಿಯ ಪ್ರದೀಪ್, ತಾಲೂಕು ಪಂಚಾಯಿತಿ ಯೋಜನಾಧಿಕಾರಿ ಚನ್ನವೀರಪ್ಪ ಸೇರಿದಂತೆ ಗಿರಿಜಾ, ದೇವೇಂದ್ರನಾಯ್ಕ್ ಹಾಗೂ ಇತರರು ಉಪಸ್ಥಿತರಿದ್ದರು.

## ಕಲ್ಲೂರು ಬಳಿ ಕಾರು ಡಿಕ್ಕಿ ಹೊಡೆದು ನಾಲ್ಕು ಹಸುಗಳ ದುರ್ಮರಣ
### ತಪ್ಪಿತಸ್ಥನ ವಿರುದ್ಧ ಕಠಿಣ ಕ್ರಮಕ್ಕೆ ಸಾರ್ವಜನಿಕರ ಆಗ್ರಹ

ಧೈರ್ಯದ ದಾರಿ

**ರಾಯಚೂರು, ಜೂ. 8:** ರಾಯಚೂರು–ಸಿಂಧನೂರು ರಾಷ್ಟ್ರೀಯ ಹೆದ್ದಾರಿಯ ಕಲ್ಲೂರು ಸಮೀಪ ಭಾನುವಾರ ಸಂಜೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ನಾಲ್ಕು ಹಸುಗಳು ಸಾವನ್ನಪ್ಪಿರುವ ಘಟನೆ ನಡೆದಿದೆ.

ಸ್ಥಳೀಯರ ಮಾಹಿತಿ ಪ್ರಕಾರ, ರಾಯಚೂರಿನ ಮಾರ್ವಾಡಿ ನಿವಾಸಿಯೊಬ್ಬರು ಕಾರನ್ನು ಅತಿವೇಗ ಹಾಗೂ ನಿರ್ಲಕ್ಷ್ಯದಿಂದ ಚಲಾಯಿಸಿದ್ದು, ಮದ್ಯದ ಅಮಲಿನಲ್ಲಿದ್ದರು ಎಂಬ ಆರೋಪವೂ ಕೇಳಿಬಂದಿದೆ. ಸಂಜೆ ಸುಮಾರು 7 ಗಂಟೆ ವೇಳೆಗೆ ಹೆದ್ದಾರಿಯಲ್ಲಿ ಸಾಗುತ್ತಿದ್ದ ಹಸುಗಳಿಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ನಾಲ್ಕು ಹಸುಗಳು ಸ್ಥಳದಲ್ಲೇ ಮೃತಪಟ್ಟಿವೆ.

ಈ ದುರ್ಘಟನೆಯಿಂದ ಹಸುಗಳ ಮಾಲೀಕರಾದ ಬಡ ರೈತ ಕುಟುಂಬಗಳಿಗೆ ಅಪಾರ ಆರ್ಥಿಕ ನಷ್ಟ ಉಂಟಾಗಿದ್ದು, ಕುಟುಂಬಸ್ಥರು ದುಃಖದಲ್ಲಿ ಮುಳುಗಿದ್ದಾರೆ. ಗ್ರಾಮಸ್ಥರು ಹಾಗೂ ಸಾರ್ವಜನಿಕರು ಘಟನೆಯನ್ನು ತೀವ್ರವಾಗಿ ಖಂಡಿಸಿದ್ದು, ತಪ್ಪಿತಸ್ಥ ವಾಹನ ಚಾಲಕನ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ



ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.ಹಸುಗಳನ್ನು ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರವನ್ನು ನೀಡಬೇಕು ಹಾಗೂ ನ್ಯಾಯ ಒದಗಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಅಲ್ಲದೆ, ಪ್ರಕರಣದ ಸಮಗ್ರ ತನಿಖೆ ನಡೆಸಿ ಯಾವುದೇ ಒತ್ತಡಕ್ಕೆ ಮಣಿಯದೆ ತಪ್ಪಿತಸ್ಥನ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಮನವಿ ಮಾಡಿದ್ದಾರೆ. ಗ್ರಾಮಸ್ಥರ ಪ್ರಕಾರ, ಹೆದ್ದಾರಿಯಲ್ಲಿ ವಾಹನಗಳ ಅತಿವೇಗದ ಸಂಚಾರದಿಂದ ಇಂತಹ ದುರ್ಘಟನೆಗಳು ಮರುಕಳಿಸುತ್ತಿದ್ದು, ರಸ್ತೆ ಸುರಕ್ಷತೆಗೆ ಸಂಬಂಧಿಸಿದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

## ತುಮಾಕೂರಿನ ಶ್ರೀ ವಾಲ್ಮೀಕಿ ಸನಿವಾಸ ಪ್ರೌಢಶಾಲೆಗೆ ಶಾಲಾ ದಾಖಲಾತಿ, ಉಚಿತ ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ ಅಹ್ವಾನ

ಧೈರ್ಯದ ದಾರಿ

**ಮಾನ್ವಿ :** ತುಮಾಕೂರಿನ ಶ್ರೀ ವಾಲ್ಮೀಕಿ ಸನಿವಾಸ ಪ್ರೌಢಶಾಲೆಯ ನೇತೃತ್ವದಲ್ಲಿ ಪ್ರಸಕ್ತ 2025–26 ನೇ ಸಾಲಿನ ಶಾಲಾ ದಾಖಲಾತಿ, ಹಾಸ್ಟಲ್ ಗೆ ಉಚಿತ ಪ್ರವೇಶಕ್ಕೆ ಅರ್ಜಿ ಅಹ್ವಾನಿಲಾಗಿದ್ದು ಅಸಕ್ತ ಎಲ್ಲಾ ವರ್ಗದ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಈಗಾಗಲೇ ಶಿಕ್ಷಣ ಸಂಸ್ಥೆ ವರ್ಗದಿಂದ ತಾಲೂಕಿನ ವಿವಿಧ ಗ್ರಾಮಗಳಿಗೆ ಬೇಟಿ ನೀಡಿ ಪ್ರಚಾರ ಕೈಗೊಳಲಾಗಿದೆ. ಅಸಕ್ತರು ಉಚಿತ ದಾಖಲಾತಿ, ಹಾಸ್ಟೆಲ್ ಪ್ರವೇಶಕ್ಕೆ ನೊಂದಾಯಿಸಿಕೊಳ್ಳಬೇಕು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯು ಘಟಕ ಜಿಲ್ಲಾಧ್ಯಕ್ಷ ಶರಣಬಸವ ನಾಯಕ ಜಾನೇಕಲ್ ಹೇಳಿದರು. ಈ ವೇಳೆ ಮಾತನಾಡಿ 45 ವರ್ಷಗಳ ಹಿಂದೆ ಸ್ಥಾಪಿತವಾದ ಶ್ರೀ ವಾಲ್ಮೀಕಿ ಸನಿವಾಸ ಪ್ರೌಢಶಾಲೆಯು ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಾ ಬರುತ್ತಿದೆ.ಯಾವುದೇ ರೀತಿಯ ಡೊನೇಷನ್ ತೆಗೆದುಕೊಳ್ಳದೆ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ರೂಪಿಸುವ ಗುರಿ ಹೊಂದಿರುವ ಕೀರ್ತಿ ಈ ಶಾಲೆಗೆ ಸಲ್ಲುತ್ತದೆ.

ಗ್ರಾಮೀಣ ಪ್ರದೇಶದ ಬಡ ಹಿಂದುಳಿದ ವರ್ಗಗಳ, ಎಸ್.ಸಿ. ಹಾಗೂ ಎಸ್. ಟಿ. ವಿದ್ಯಾರ್ಥಿಗಳಿಗೆ ಉಚಿತ ಹಾಸ್ಟೆಲ್ ಸೌಲಭ್ಯವನ್ನೂ ಪಡೆಯಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಶ್ರೀ ವಾಲ್ಮೀಕಿ ಸನಿವಾಸ ಪ್ರೌಢಶಾಲೆ, ಬಿ. ಹೆಚ್. ರಸ್ತೆ ತುಮಕೂರು– ದೂ. 9964979420. 9449306238 ಸಂಪರ್ಕಿಸಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಸ್ತೂರಿ, ಉಮೇಶ,ಪಂಕಜ್, ರಾಜಶೇಖರ್, ಇಂದ್ರಾಣಿ ಇದ್ದರು



**ಮೊದಲನೇ ಪುಟದಿಂದ**

## ಜಿಲ್ಲಾ ವಾಣಿಜ್ಯೋದ್ಯಮ ಸಂಘದ ವಿವಿಧ ಪದಾಧಿಕಾರಿಗಳೊಂದಿಗೆ ಕೇಂದ್ರ ಜಂಟಿ ಕಾರ್ಯದರ್ಶಿ ಉಜ್ವಲ ಕುಮಾರ್ ಘೋಷ್ ಸಭೆ

ಸ್ಥಾಪನೆ, ಕೌಶಲ್ಯ ಅಭಿವೃದ್ಧಿ ಮತ್ತು ಕೈಗಾರಿಕಾ ತರಬೇತಿ ಕೇಂದ್ರ, ರಾಯಚೂರು ಮಹತ್ವಾಕಾಂಕ್ಷೆಯ ಜಿಲ್ಲೆಗೆ ವಿಶೇಷ ಆರ್ಥಿಕ ಮತ್ತು ಹೂಡಿಕೆ ಪ್ಯಾಕೇಜ್ ಸೇರಿದಂತೆ ಸುಮಾರು 20 ಬೇಡಿಕೆಯ ಮನವಿ ಪತ್ರವನ್ನು ನೀಡಿ, ಇವುಗಳನ್ನು ಆದಷ್ಟು ಬೇಗನೆ ಈಡೇರಿಸುವ ಮೂಲಕ ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದರು.

ಈ ವೇಳೆ ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರಿ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರು ಮಾತನಾಡಿ, ಸಂಬಂಧಿಸಿದ ಇಲಾಖೆಗಳೊಂದಿಗೆ ಮಾತನಾಡಿ ಮನವಿಗೆ ಸ್ಪಂದಿಸುವುದಾಗಿ ಜಿಲ್ಲಾ ವಾಣಿಜ್ಯೋದ್ಯಮ ಸಂಘದ ವಿವಿಧ ಪದಾಧಿಕಾರಿಗಳಿಗೆ ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ಮುಖಂಡರಾದ ಬಸವರಾಜ ಕಳಸ, ತ್ರಿವಿಕ್ರಮ ಜೋಶಿ, ಕಾಟನ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ವಿ. ಲಕ್ಷ್ಮೀಕಾಂತರೆಡ್ಡಿ, ಭರತ್ ಚಂದ್, ಶಿಲ್ಪಾ ಮೆಡಿಕೇರ್ ಲಿಮಿಟೆಡ್ ಅಧ್ಯಕ್ಷರಾದ ವಿಷ್ಣುಕಾಂತ ಭುತಡ, ರಾಸಾಯನಿಕ ತಯಾರಿಕ ಸಂಘದ ಅಧ್ಯಕ್ಷರಾದ ಡಾ.ರಮೇಶ, ರೈಸ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ, ಅಶೋಕ ಕುಮಾರ್ ಜೈನ್ ಸೇರಿದಂತೆ ಇತರರು ಇದ್ದರು.

## ಉಜ್ವಲ ಕುಮಾರ್ ಘೋಷ್ ಅವರಿಂದ ಗಬ್ಬೂರು, ಮಸರಕಲ್ ಗ್ರಾಮದ ವಿವಿಧೆಡೆ ಭೇಟಿ ಪರಿಶೀಲನೆ







ಧೈರ್ಯದ ದಾರಿ

**ರಾಯಚೂರು ಜೂನ್ 08:** ಮಹತ್ವಕಾಂಕ್ಷಿ ಜಿಲ್ಲೆ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ನಂತರ ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಗಬ್ಬೂರು ಗ್ರಾಮದ ಕಡೆ ಪ್ರಯಾಣ ಬೆಳೆಸಿ, ಗಬ್ಬೂರಿನ ಅಂಗನವಾಡಿ ಕೇಂದ್ರ ಸಂಖ್ಯೆ 07ಕ್ಕೆ ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರಿ ಅಧಿಕಾರಿಗಳಾದ ಉಜ್ವಲ ಕುವಾರ್ ಘೋಷ್ ಅವರು ಜೂನ್ 08ರ ಸೋಮವಾರ ದಂದು ಭೇಟಿ ನೀಡಿ, ಪರಿಶೀಲನೆ ಮಾಡಿದರು.

ಅಂಗನವಾಡಿಯ ಸುತ್ತಮುತ್ತಲಿನ ಪರಿಸರ, ಮಕ್ಕಳ ತರಗತಿ ಗೃಹ, ಅಡುಗೆ ಕೋಣೆ, ದಾಸ್ತಾನು ಕೊಠಡಿಗಳಿಗೆ ತೆರಳಿ ಅಲ್ಲಿನ ವ್ಯವಸ್ಥೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕರಿಗೆ ಕಟ್ಟಡದ ಸುತ್ತಮುತ್ತಲಿನ ಪರಿಸರವನ್ನು ಉತ್ತಮವಾಗಿ ಇಟ್ಟುಕೊಳ್ಳುವಂತೆ ಸೂಚನೆ ನೀಡಿದರು. ಇತ್ತೀಚಿನ ಮಳೆಯಿಂದಾಗಿ ಸೊಳ್ಳೆಗಳು ಉತ್ಪತ್ತಿಯಾಗುವ ಸಾಧ್ಯತೆ ಇರುತ್ತದೆ. ಸೊಳ್ಳೆಗಳು ಕಚ್ಚುವುದರಿಂದ ಮಕ್ಕಳಿಗೆ ರೋಗ-ರುಜಿನಗಳು ಬರುವ ಸಾಧ್ಯತೆ ಇರುತ್ತದೆ ಈ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದರು.

ಪ್ರಸಕ್ತ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಆಹಾರ, ಉತ್ಪನ್ನಗಳ ಬಗ್ಗೆ ಮಾಹಿತಿ ಪಡೆದ ಅವರು, ಉತ್ತಮ ಗುಣಮಟ್ಟದ ಆಹಾರ ವಿತರಣೆಗೆ ಸೂಚನೆ ನೀಡಿದರು. ಮಕ್ಕಳಿಗೆ ನೀಡುತ್ತಿರುವ ಆಟಿಕೆ ವಸ್ತುಗಳನ್ನು ಖುದ್ದಾಗಿ ಪರಿಶೀಲಿಸಿದರು.

ನಂತರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿದರು.

ಆಸ್ಪತ್ರೆಯ ಸ್ವಚ್ಛತೆ, ರೋಗಿಗಳಿಗೆ ನೀಡುವ ಚಿಕಿತ್ಸೆ, ತುರ್ತು ಚಿಕಿತ್ಸಾ ಘಟಕದಲ್ಲಿ ಪರಿಶೀಲನೆ ನಡೆಸಿದರು.

ಆಸ್ಪತ್ರೆಯಲ್ಲಿ ಸಿಗುವ ಸೌಲಭ್ಯಗಳ ಕುರಿತು ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದರು. ನಂತರ ಸೂಚಿ ಮಾಡುವ ಕೊಠಡಿ, ಮೆಡಿಕಲ್ ಆಫೀಸರ್ ಕೊಠಡಿ, ಪ್ರಯೋಗಾಲಯ ಕೊಠಡಿ, ಮುಖ್ಯ ಔಷಧ ಉಗ್ರಾಣಕ್ಕೆ ಭೇಟಿ ನೀಡಿ ಪರಿಶೀಲನೆ ವಾಡಿ, ಆಸ್ಪತ್ರೆಗೆ ಸಿಬ್ಬಂದಿಗಳ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಶಾ ಕಾರ್ಯಕರ್ತೆ ಗರ್ಭಿಣಿಯರಿಗೆ ಕಾಲಕಾಲಕ್ಕೆ ಲಸಿಕೆ ಕೊಡಿಸಬೇಕು. ಸರ್ಕಾರದ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಆಶಾ ಕಾರ್ಯಕರ್ತೆಯರ ಬಾಕಿ ವೇತನವನ್ನು ಕೂಡಲೇ ಬಿಡುಗಡೆ ಮಾಡುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಇದಕ್ಕೂ ಮುಂಚೆ ಗಬ್ಬೂರಿನ ನಾಡ ಕಚೇರಿಗೆ ಭೇಟಿ ನೀಡಿದರು.

ನಂತರ ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಮಸರಕಲ್ ಗ್ರಾಮದ ಶಕ್ತಿ ವೀಟಾ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲನೆ ಮಾಡಿದರು. ಕೇಂದ್ರದ ಶೇಖರಣಾ ವಿಭಾಗ, ತಯಾರಿಕಾ ವಿಭಾಗ ಸೇರಿದಂತೆ ವಿವಿಧ ವಿಭಾಗವನ್ನು ವೀಕ್ಷಣೆ ಮಾಡಿ, ಆಹಾರ ತಯಾರಿಕೆ ಯಂತ್ರಗಳ ಕುರಿತು ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಡಾ.ಟಿ.ರೋಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ದೇವದುರ್ಗ ತಹಶಿಲ್ದಾರ್ ನಾಗಮ್ಮ ಕಟ್ಟಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ದೇವದುರ್ಗ ತಾಲೂಕು ಆರೋಗ್ಯಾಧಿಕಾರಿ ಡಾ.ಬನದೇಶ್ವರ, ದೇವದುರ್ಗ ಸಿಡಿಪಿಓ ಮಹೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಸರ್ಕಾರದ ವಿವಿಧ ಯೋಜನೆಗಳನ್ನು ಫಲಾನುವಿಗಳಿಗೆ ತಲುಪಿಸಿ: ಕೇಂದ್ರ ಜಂಟಿ ಕಾರ್ಯದರ್ಶಿ ಉಜ್ವಲ ಕುಮಾರ್ ಘೋಷ್




ಧೈರ್ಯದ ದಾರಿ

**ರಾಯಚೂರು ಜೂನ್ 08:** ದೇಶದಲ್ಲಿನ ಮಹತ್ವಾಕಾಂಕ್ಷಿ ಜಿಲ್ಲೆಗಳು ಮತ್ತು ಬ್ಲಾಕ್‌ಗಳಲ್ಲಿ ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡುವ ಮೂಲಕ ಹಿಂದುಳಿದ ಹಣೆಪಟ್ಟಿಯನ್ನು ಕಳಚುವುದು ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಉದ್ದೇಶವಾಗಿದ್ದು, ಸರ್ಕಾರದ ವಿವಿಧ ಯೋಜನೆಗಳನ್ನು ಅರ್ಹ ಫಲಾನುವಿಗಳಿಗೆ ತಲುಪಿಸಲು ಅಗತ್ಯ ಕ್ರಮ ವಹಿಸಬೇಕೆಂದು ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರಿ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರು ಹೇಳಿದರು.

ಜೂನ್ 08ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹತ್ವಕಾಂಕ್ಷಿ ಜಿಲ್ಲೆ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಮಹತ್ವಾಕಾಂಕ್ಷೆ ಜಿಲ್ಲೆಯೆಂದು ಗುರುತಿಸಿಕೊಂಡಿರುವ ರಾಯಚೂರಿನ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುವ ಮೂಲಕ ನಿರೀಕ್ಷಿತ ಗುರಿ ತಲುಪಲಾಗುತ್ತಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಕೃಷಿ, ಶಿಕ್ಷಣ, ಆರೋಗ್ಯ, ನೀರಾವರಿ, ಮೂಲಸೌಕರ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕೌಶಲ ಕ್ಷೇತ್ರದಲ್ಲಿ ತೀರಾ ಹಿಂದುಳಿದ ದೇಶದ 112 ಮಹತ್ವಾಕಾಂಕ್ಷಿ ಜಿಲ್ಲೆ ಮತ್ತು 500 ತಾಲ್ಲೂಕುಗಳನ್ನು ಬ್ಲಾಕ್ ಎಂದು ವಿಂಗಡಿಸಿ, ಸುಸ್ಥಿರ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದರು.

ವಿವಿಧ ಸರ್ಕಾರದ ಸಾಲ ಸೌಲಭ್ಯಗಳು, ಯೋಜನೆಗಳು, ಪಿಂಚಣಿಗಳು ಸರಿಯಾಗಿ ಅನುಷ್ಠಾನ ಮಾಡಬೇಕು. ಜಿಲ್ಲೆಯಲ್ಲಿ ಶೇ.100ರಷ್ಟು ಆಧಾರ್ ಜೋಡಣೆ ಮಾಡಬೇಕು. ರಾಯಚೂರು ಜಿಲ್ಲೆಯಲ್ಲಿ ನೀತಿ ಆಯೋಗದ ಎಲ್ಲಾ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು. ಅನುದಾನ ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು ಎಂದರು.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಪ್ರಧಾನಮಂತ್ರಿಗಳ ವಿಶೇಷ ಕಾರ್ಯಕ್ರಮಗಳಲ್ಲಿ ಒಂದಾದ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯಡಿ ಜಿಲ್ಲೆಯಲ್ಲಿ ವಿವಿಧ ಪ್ರಗತಿ ನಡೆದಿದ್ದು, ಸೂಚ್ಯಂಕಗಳಲ್ಲಿ ರಾಯಚೂರು ಜಿಲ್ಲೆ ಉತ್ತಮ ಸ್ಥಾನ ಪಡೆದಿದೆ.ದೇಶದ ಹಿಂದುಳಿದ 112 ಜಿಲ್ಲೆಗಳಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆ 2018ರಲ್ಲಿ ಜಾರಿಗೊಂಡಿದ್ದು, ವಿವಿಧ ಕ್ಷೇತ್ರಗಳಲ್ಲಿ ಜಿಲ್ಲೆಯನ್ನು ಅಭಿವೃದ್ಧಿ ಪಥದಲ್ಲಿ ಸಾಗಿಸುವುದು ಗುರಿಯಾಗಿದೆ. ಜನರ ಆರೋಗ್ಯ ಮತ್ತು ಪೌಷ್ಟಿಕ, ಕೃಷಿ ಮತ್ತು ಜಲ ಸಂಪನ್ಮೂಲ, ಶಿಕ್ಷಣ, ಆರ್ಥಿಕ ಸೇರ್ಪಡೆ ಹಾಗೂ ಕೌಶಲಾಭಿವೃದ್ಧಿ ಮತ್ತು ಮೂಲಸೌಕರ್ಯಗಳಿಗೆ 49 ಸೂಚ್ಯಂಕ ನೀಡಲಾಗಿದ್ದು, ಅವುಗಳನ್ನು ಸರಿಯಾಗಿ ಅನುಷ್ಠಾನ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಪೌಸ್ತಿಕ ರಾಯಚೂರಿನಡಿ ತಾಯಂದಿರು, ಮಕ್ಕಳು ಮತ್ತು ಹದಿಹರೆಯದವರ ಆರೋಗ್ಯ ಫಲಿತಾಂಶಗಳನ್ನು ಸುಧಾರಿಸಲು ದತ್ತಾಂಶ ಆಧಾರಿತ ಮಧ್ಯಸ್ಥಿಕೆಗಳ ಮೂಲಕ 250 ದುರ್ಬಲ ಹಳ್ಳಿಗಳನ್ನು ಗುರಿಯಾಗಿಟ್ಟುಕೊಂಡು ಸಮಗ್ರ ಪೋಷಣೆ ಮತ್ತು ಆರೋಗ್ಯ ಉಪಕ್ರಮ ಹಾಗೂ ಸಂಪೂರ್ಣತಾ ಅಭಿಯಾನಡಿ ರೋಗನಿರೋಧಕ ಶಕ್ತಿ, ಎಎನ್.ಸಿ, ಸಾಂಸ್ಥಿಕ ವಿತರಣೆ ಮತ್ತು ಪೌಷ್ಟಿಕಾಂಶ ಸೇವೆಗಳ ಶುದ್ಧತ್ವ, ಲ್ಯಾಬ್ ಮತ್ತು ಅನುಸರಣೆಗಳ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದರು.

ಹೆಚ್.ಆರ್.ಪಿ ಕಿಂಗ್ ಮತ್ತು ರಾಯಚೂರು, ಮಾನ್ವಿ, ಸಿಂಧನೂರು ಮತ್ತು ಲಿಂಗಸುಗೂರುಗಳಲ್ಲಿ ಸ್ಥಾಪಿಸಲಾದ ಎಮ್.ಸಿ.ಹೆಚ್ ಆಸ್ಪತ್ರೆಗಳಲ್ಲಿ 7020 ಹೆರಿಗೆ ಮಾಡಿಸಲಾಗಿದೆ. ಅಲ್ಲದೆ ಅಂಗನವಾಡಿ ಕೇಂದ್ರಗಳ ಮೂಲಕ ಬೆಳವಣಿಗೆಯು ಮೇಲ್ವಿಚಾರಣೆ ಮತ್ತು ಪೌಷ್ಟಿಕಾಂಶ ಸಮಾಲೋಚನೆ ಕಾಲಕಾಲಕ್ಕೆ ಮಾಡಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ 2011ರ ಜನಸಂಖ್ಯೆ ಪ್ರಕಾರ 19,28,812 ಜನಸಂಖ್ಯೆ ಹೊಂದಿದೆ. ಒಟ್ಟು 8 ತಾಲೂಕುಗಳನ್ನು ಒಳಗೊಂಡಿದೆ. 884 ಕಂದಾಯ ಹಾಗೂ 179 ಗ್ರಾಮ ಪಂಚಾಯತಿಗಳು, 1658 ಶಾಲೆಗಳು, ಒಂದು ಸರ್ಕಾರಿ ಮೆಡಿಕಲ್ ಸಂಸ್ಥೆ, 4 ತಾಲೂಕು ಜನರಲ್ ಆಸ್ಪತ್ರೆ, 6 ಸಮುದಾಯ ಆರೋಗ್ಯ ಕೇಂದ್ರಗಳು, 50 ಪ್ರಾಥಮಿಕ ಆರೋಗ್ಯ ಕೇಂದ್ರ, 6 ಯುಪಿಎಚ್.ಸಿ ಕೇಂದ್ರಗಳ ಜೊತೆಗೆ ಕೃಷಿ ವಿಶ್ವವಿದ್ಯಾಲಯ, ರಾಯಚೂರು ವಿಶ್ವವಿದ್ಯಾಲಯದ ಹಾಗೂ ಐಐಐಟಿ ರಾಯಚೂರಿನಲ್ಲಿ ಕಾರ್ಯ ನಿರ್ವಹಿಸುತ್ತವೆ ಎಂದು

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಡಾ.ಟಿ.ರೋಣಿ ಅವರು ಸಭೆಗೆ ಮಾಹಿತಿ ನೀಡಿದರು.

ಈ ವೇಳೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಅವರು ಮಾತನಾಡಿ, ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾರ್ಗದರ್ಶನದಲ್ಲಿಜಿಲ್ಲೆಯಲ್ಲಿ 10 ನೇ ತರಗತಿಯ ಫಲಿತಾಂಶಗಳಲ್ಲಿ ಸುಧಾರಣೆಗೆ ಶ್ರಮಿಸಲಾಗಿದೆ. ರಾಜ್ಯಕ್ಕೆ ರಾಯಚೂರು ಜಿಲ್ಲೆಯು 21ನೇ ಸ್ಥಾನ ಪಡೆದಿದೆ. ಕಾಲಕಾಲಕ್ಕೆ ಶಾಲಾ ತಪಾಸಣೆ ಮತ್ತು ಮನೆ ಮನೆಗೆ ಸಮೀಕ್ಷೆಯ ಮೂಲಕಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಪುನರ್ ಶಾಲೆಗೆ ಸೇರಿಸಲು ಸೂಕ್ತ ಕ್ರಮವಹಿಸಲಾಗಿದೆ. ಅಲ್ಲದೆ ಜಿಲ್ಲೆಯಲ್ಲಿ ಶೈಕ್ಷಣಿಕ ಮೇಲ್ವಿಚಾರಣೆ ಮತ್ತು ಉತ್ತಮ ಅಭ್ಯಾಸಕ್ಕಾಗಿ ನೀತಿ ಆಯೋಗದಿಂದ 50 ಶಾಲೆಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪನೆ ಮಾಡಲಾಗಿದೆ ಎಂದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್ ಅವರು ಮಾತನಾಡಿ, 2026ರ ಮಾರ್ಚ್ 26ರವಗೆ ಜಿಲ್ಲೆಯಲ್ಲಿ 17,138 ಮಣ್ಣಿನ ಆರೋಗ್ಯ ಕಾರ್ಡ್ಗಳು ವಿತರಿಸಲಾಗಿದೆ. ನರೇಗಾ ಯೋಜನೆಯಡಿ 10,794 ಜಲಮೂಲಗಳನ್ನು ಪುನರುಜ್ಜೀವನಗೊಳಿಸಲಾಗಿದೆ. ಅಲ್ಲದೆ ಜಿಲ್ಲೆಯಲ್ಲಿ 6 ಎಲೆಕ್ಟ್ರಾನಿಕ್ ಮಾರುಕಟ್ಟೆಗೆ ಸಂಪರ್ಕ ಹೊಂದಿವೆ ಎಂದು ಸಭೆಗೆ ಮಾಹಿತಿ ನೀಡಿದರು.

ಹನಿ ಮತ್ತು ತುಂತುರು ನೀರಾವರಿ, ನೀರು ಉಳಿಸುವ ತಂತ್ರಜ್ಞಾನಗಳ ಅಳವಡಿಕೆ ಕುರಿತು ರೈತರಿಗೆ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ. ಕಾಲುವೆ ನೀರಾವರಿ ವ್ಯವಸ್ಥೆಗಳ ಸುಧಾರಿತ ಬಳಕೆ ಹಾಗೂ ರೈತರಿಗೆ ನಿಯಮಿತ ರೈತ ತರಬೇತಿಗಳು, ಪ್ರಾತ್ಯಕ್ಷಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿ ಪ್ರಾಣಿಗಳಿಗೆ ಶೇ.100ರಷ್ಟು ಲಸಿಕೆ ಹಾಕಲಾಗಿದೆ ಎಂದರು.ನೀತಿ ಆಯೋಗದಿಂದ ರಾಯಚೂರು ಜಿಲ್ಲೆಯ ವಿವಿಧ ತಾಲೂಕುಗಳಲ್ಲಿನ 24 ಜಲಮೂಲಗಳ ಪುನರುಜ್ಜೀವನ ನೀಡಲಾಗಿದೆ ಎಂದು ಸಭೆಗೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ನಿರ್ದೇಶಕ ಶರಣಬಸರಾಜ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ತಿಮ್ಮಪ್ಪ ಬಿರಾದಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ,ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ.ನಂದಿತಾ, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಇರಾನ್-ಇಸ್ರೇಲ್ ನಡುವೆ ಭೀಕರ ಕ್ಷಿಪಣಿ ದಾಳಿ: ಮಧ್ಯಪ್ರಾಚ್ಯದಲ್ಲಿ ಯುದ್ಧದ ಕಾರ್ಮೋಡ

**ಟೆಹ್ರಾನ್/ಜೆರೂಸಲಂ.ಜೂ8:** ಮಧ್ಯಪ್ರಾಚ್ಯದಲ್ಲಿ ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ಇಂದು ತೀವ್ರ ಸ್ವರೂಪಕ್ಕೆ ತಿರುಗಿದ್ದು, ಉಭಯ ದೇಶಗಳು ಪರಸ್ಪರ ಭೀಕರ ಕ್ಷಿಪಣಿ ದಾಳಿಗಳನ್ನು ನಡೆಸಿವೆ.

ಇರಾನ್‌ನ ಇತ್ತೀಚಿನ ದಾಳಿಯ ಬೆನ್ನಲ್ಲೇ ಆತಂಕಗೊಂಡಿರುವ ಕೇಂದ್ರ ಸರ್ಕಾರವು ಇರಾನ್‌ನಲ್ಲಿರುವ ತನ್ನ ನಾಗರಿಕರಿಗೆ ತಕ್ಷಣವೇ ದೇಶ ತೊರೆಯುವಂತೆ ತುರ್ತು ಮಾರ್ಗಸೂಚಿ ಹೊರಡಿಸಿದೆ. ಇರಾನ್‌ನಿಂದ ಇಸ್ರೇಲ್ ಮೇಲೆ 3 ಹಂತಗಳಲ್ಲಿ ಭೀಕರ ಕ್ಷಿಪಣಿ ಮಳೆ; ಇಸ್ರೇಲ್‌ನಿಂದ ಇರಾನ್‌ನ ಪೆಟ್ರೋಕೆಮಿಕಲ್ ತಾಣಗಳ ಮೇಲೆ ವಾಯುದಾಳಿ ನಡೆಸಿದ್ದು ಇರಾನ್‌ನಲ್ಲಿರುವ ಭಾರತೀಯರು ಲಭ್ಯವಿರುವ ಸಾರಿಗೆ ಸಂಪರ್ಕ ಬಳಸಿ ತಕ್ಷಣ ದೇಶ ಬಿಡಲು ಸೂಚನೆ ನೀಡಿದೆ.


ಇದರಿಂದ ಕಚ್ಚಾ ತೈಲ ದರ ಶೇ. 3 ರಷ್ಟು ಏರಿಕೆ; ಭಾರತೀಯ ಶೇರು ಮಾರುಕಟ್ಟೆಯಲ್ಲಿ ಭಾರಿ ಕುಸಿತ. ಭಾರತೀಯ ರಾಯಭಾರ ಕಚೇರಿಯ ತುರ್ತು ಸೂಚನೆ ನೀಡಿದೆ. ಇರಾನ್‌ನಲ್ಲಿ ಹದಗೆಡುತ್ತಿರುವ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಭಾರತೀಯ ನಾಗರಿಕರಿಗೆ ಇರಾನ್ ತೊರೆಯುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

"ಪ್ರಸ್ತುತ ಇರಾನ್‌ನಲ್ಲಿರುವ ಭಾರತೀಯರು ಲಭ್ಯವಿರುವ ಯಾವುದೇ ಸಾರಿಗೆ ವ್ಯವಸ್ಥೆಯನ್ನು ಬಳಸಿಕೊಂಡು ತಕ್ಷಣವೇ ದೇಶದಿಂದ ಹೊರಡಬೇಕು ಮತ್ತು ಮುಂದಿನ ಆದೇಶದವರೆಗೆ ಯಾರೂ ಇರಾನ್‌ಗೆ ಪ್ರಯಾಣ ಬೆಳೆಸಬಾರದು," ಎಂದು ಭಾರತ ಸರ್ಕಾರ ವಿನಂತಿಸಿದೆ.

ಬನಾನ್ ಮತ್ತು ಬೈರೂತ್ ಮೇಲಿನ ಇಸ್ರೇಲ್ ದಾಳಿಗೆ ಪ್ರತೀಕಾರವಾಗಿ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಇಸ್ರೇಲ್‌ನ ಪ್ರಮುಖ ವಾಯುನೆಲೆಗಳಾದ 'ನೆವಾಟಿಮ್' ಮತ್ತು 'ತೆಲ್ ನೋಫ್' ಮೇಲೆ ಮೂರು ಹಂತಗಳಲ್ಲಿ ಕ್ಷಿಪಣಿ ದಾಳಿ ನಡೆಸಿರುವುದಾಗಿ ಘೋಷಿಸಿದೆ. ಜೆರೂಸಲಂ ಆಕಾಶದಲ್ಲಿ ಭಾರಿ ಸ್ಫೋಟದ ಸೌಂಡ್‌ಗಳು ಕೇಳಿಬಂದಿವೆ.

ಇರಾನ್ ದಾಳಿಗೆ ಪ್ರತಿಯಾಗಿ ಇಸ್ರೇಲ್ ರಕ್ಷಣಾ ಪಡೆ ಪಶ್ಚಿಮ ಮತ್ತು ಮಧ್ಯ ಇರಾನ್‌ನಲ್ಲಿ ಭೀಕರ ದಾಳಿ ಸಂಘಟಿಸಿದೆ. ವಿಶೇಷವಾಗಿ ಇರಾನ್‌ನ ನೈಋತ್ಯ ಭಾಗದಲ್ಲಿರುವ ಮಹ್‌ಶಹರ್‌ನ ಪೆಟ್ರೋಕೆಮಿಕಲ್ ಸಂಕೀರ್ಣದ ಮೇಲೆ ಇಸ್ರೇಲ್ ಯುದ್ಧವಿಮಾನಗಳು ದಾಳಿ ನಡೆಸಿ ಧ್ವಂಸಗೊಳಿಸಿವೆ. ಮುನ್ನೆಚ್ಚರಿಕಾ ಕ್ರಮವಾಗಿ ಇರಾನ್ ತನ್ನ ವಾಯುನೆಲೆಯನ್ನು ಸಂಪೂರ್ಣವಾಗಿ ಮುಚ್ಚಲಾಗಿದೆ ಎಂದು ಸುದ್ದಿಸಂಸ್ಥೆ ತಿಳಿಸಿದೆ.

ಒಂದೆಡೆ ಪರಿಸ್ಥಿತಿ ಕೈಮೀರುತ್ತಿದ್ದರೂ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶಾಂತಿ ಮಾತುಕತೆಗೆ ಒತ್ತು ನೀಡಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ ಕರೆ ಮಾಡಿರುವ ಟ್ರಂಪ್, "ಇಸ್ರೇಲ್ ತನ್ನ ದಾಳಿ ಮಾಡಿದೆ, ಇರಾನ್ ಕೂಡ ತಿರುಗೇಟು ನೀಡಿದೆ. ಇಲ್ಲಿಗೆ ಸಾಕು, ಮತ್ತೆ ಪ್ರತಿದಾಳಿ ನಡೆಸಿ ಶಾಂತಿ ಒಪ್ಪಂದವನ್ನು ಹಾಳು ಮಾಡಬೇಡಿ," ಟ್ರಂಪ್ ಎಂದು ಮನವಿ ಮಾಡಿದ್ದಾರೆ ಹಾಗೂ ಅಮೆರಿಕ ಮತ್ತು ಇರಾನ್ ನಡುವೆ



ಶಾಂತಿ ಒಪ್ಪಂದ ಸದ್ಯದಲ್ಲೇ ಸಹಿಯಾಗಲಿದೆ ಎಂದು ಟ್ರಂಪ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

. ಹಿಜ್ಬುಲ್ಲಾ ಮತ್ತು ಹೌತಿಗಳ ಪ್ರವೇಶ ಯೆಮೆನ್‌ನ ಇರಾನ್ ಬೆಂಬಲಿತ ಹೌತಿ ಬಂಡುಕೋರರು ಇಸ್ರೇಲ್ ಕಡೆಗೆ ಕ್ಷಿಪಣಿಗಳನ್ನು ಉಡಾಯಿಸಿದ್ದು, ಕೆಂಪು ಸಮುದ್ರದಲ್ಲಿ ಇಸ್ರೇಲ್ ಸಂಬಂಧಿತ ಹಡಗುಗಳ ಸಂಚಾರವನ್ನು ಸಂಪೂರ್ಣವಾಗಿ ನಿಷೇಧಿಸುವುದಾಗಿ ಘೋಷಿಸಿದ್ದಾರೆ. ಆರ್ಥಿಕತೆ ಮೇಲಿನ ಭೀಕರ ಪರಿಣಾಮಯುದ್ಧದ ಕಿಡಿಯು ಜಾಗತಿಕ ಮಾರುಕಟ್ಟೆಯನ್ನು ತಲ್ಲಣಗೊಳಿಸಿದೆ.

ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬ್ರೆಂಟ್ ಕಚ್ಚಾ ತೈಲದ ಬೆಲೆ ಶೇ. 3.29 ರಷ್ಟು ಹೆಚ್ಚಳವಾಗಿ ಪ್ರತಿ ಬ್ಯಾರೆಲ್‌ಗೆ 96.15 ಅಮೆರಿಕನ್ ಡಾಲರ್ ತಲುಪಿದೆ. ಇದರ ನೇರ ಪರಿಣಾಮ ಭಾರತೀಯ ಮಾರುಕಟ್ಟೆಯ ಮೇಲಾಗಿದ್ದು, ಮುಂಬೈ ಶೇರು ಮಾರುಕಟ್ಟೆಯ ಸಂವೇದಿ ಸೂಚ್ಯಂಕ ಸೆನ್ಸೆಕ್ಸ್ 724 ಪಾಯಿಂಟ್ಸ್ ಕುಸಿತ ಕಂಡು 73,518 ಕ್ಕೆ ತಲುಪಿದರೆ, ನಿಫ್ಟಿ 222 ಪಾಯಿಂಟ್ಸ್ ಕುಸಿದಿದೆ. ಇತ್ತ ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ 17 ಪೈಸೆ ಕುಸಿತ ಕಂಡು 95.35 ರೂ. ಗಳ ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ತಲುಪಿದೆ.

ಧೈರ್ಯದ ದಾರಿ ಮಂಗಳವಾರ: 09–06–2026

# ಲಂಚ: ಕೆ. ಬಿ. ಜೆ. ಎನ್. ಎಲ್ ಇಬ್ಬರು ಅಭಿಯಂತರರು ಲೋಕಾಯುಕ್ತ ಬಲೆಗೆ



**ವಿಜಯಪುರ, ಜೂ. 8:**ಲಂಚ ಪಡೆಯುತ್ತಿದ್ದ ಕೆಬಿಜೆಎನ್ ಎಲ್ ಕಚೇರಿಯ ಇಬ್ಬರು ಅಭಿಯಂತರರು ಸಾಲೋಟಗಿ ಕಚೇರಿಯಲ್ಲಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.
ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಸೇವಾಲಾಲ್ ಚೌವಾಣ, ಕಿರಿಯ ಅಭಿಯಂತರ ಸಾತಲಿಂಗಪ್ಪ ರೊಡಗಿ ಲೋಕಾಯುಕ್ತ ಬಲೆಗೆ ಬಿದ್ದ ಅಭಿಯಂತರರು.
ಕೆಬಿಜೆಎನ್ ಎಲ್ ಕೆನಾಲ್ ಕಾಮಗಾರಿ ಪೂರೈಸಿದ 3,71,419 ಮೊತ್ತದ ಬಿಲ್ ಪಾಸ್ ಮಾಡಿ ಮೇಲಾಧಿಕಾರಿ ಕಚೇರಿಗೆ ಕಳುಹಿಸಲು ಅಭಿಯಂತರ ಸೇವಾಲಾಲ್ 10,000 ರೂ. ಹಾಗೂ ಕಿರಿಯ ಅಭಿಯಂತರ ಸಾತಲಿಂಗಪ್ಪ ಅವರು 8,000 ರೂ. ಗಳ ಲಂಚದ ಬೇಡಿಕೆಯನ್ನು ಇಟ್ಟಿದ್ದರು.
ನಾನಾಸಾಹೇಬ ರೋಡಗಿ ಅವರು ಈ ಬಗ್ಗೆ ವಿಜಯಪುರ ಲೋಕಾಯುಕ್ತ ಪೊಲೀಸ್ ಠಾಣೆಗೆ ಆಗಮಿಸಿ ದೂರು ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು ಕಾರ್ಯ ಪ್ರವೃತ್ತರಾಗಿ ಬಲೆ ಬೀಸಿ ಲಂಚ ಪಡೆಯುತ್ತಿರುವಾಗಲೇ ರೆಡ್ ಹ್ಯಾಂಡ್ ಆಗಿ ಇಬ್ಬರು ಅಭಿಯಂತರರನ್ನು ಬಂಧಿಸಿ ಕೋರ್ಟ್ ಗೆ ಹಾಜರಪಡಿಸಲಾಗಿದೆ. ಕೋರ್ಟ್ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.
ಲೋಕಾಯುಕ್ತ ಎಸ್ಪಿ ಟಿ. ಮಲ್ಲೇಶ ಮಾರ್ಗದರ್ಶನದಲ್ಲಿ ಡಿಎಸ್ಪಿ ಮಲ್ಲಿಕಾರ್ಜುನ ಎಸ್. ನೇತೃತ್ವದಲ್ಲಿ ಇನ್ಸ್ ಪೆಕ್ಟರ್ ಗಳಾದ ಆನಂದ ಟಕ್ಕಣ್ಣವರ, ಆನಂದ ಡೋಣಿ, ನಿಂಗಪ್ಪ ಪೂಜಾರಿ ಹಾಗೂ ಸಿಬ್ಬಂದಿ
ದಾಳಿ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಅಖಿಲ ಭಾರತ ಮೇಯರ್ ಸಮ್ಮೇಳನದಲ್ಲಿ ಗಾದೆಪ್ಪ



**ಬಳ್ಳಾರಿ, ಜೂ.8;** ಉತ್ತರ ಪ್ರದೇಶದ ನೋಯ್ಡದಲ್ಲಿ ಹಮ್ಮಿಕೊಂಡಿದ್ದ ಅಖಿಲ ಭಾರತ ಮೇಯರ್ ಗಳ ' ಸಮ್ಮೇಳನದಲ್ಲಿ ಇಲ್ಲಿನ ಪಾಲಿಕೆಯ ಮೇಯರ್ ಪಿ.ಗಾದೆಪ್ಪ ಪಾಲ್ಗೊಂಡಿದ್ದರು.ಸಮ್ಮೇಳನದಲ್ಲಿ ನಡೆದ ವಾಯು ಮಾಲಿನ್ಯ ತಡೆಗಟ್ಟುವ ಕುರಿತು ನಡೆದ ವಿಚಾರ ಸಂಕಿರಣದಲ್ಲಿ ಗಾದೆಪ್ಪ ವಾಯು ಮಾಲಿನ್ಯದ ಕುರಿತು ಮಾತನಾಡಿದರು.

ಈ ವೇಳೆ ಉತ್ತರ ಪ್ರದೇಶದ ಮಂತ್ರಿ ಡಾ. ಸೋಮೆಂದ್ರ ತೋಮರ್, ಯಮುನಾ ನಗರದ ಮೇಯರ್ ಸುಮನ್ ಬಹ್ಮನಿ, ದೆಹಲಿ ಮೇಯರ್ ಪ್ರವೇಶ್ ಮೊದಲಾದವರು ಪಾಲ್ಗೊಂಡಿದ್ದರು.ಸಮ್ಮೇಳನದಲ್ಲಿ ವಾಯು ಮಾಲಿನ್ಯದ ಕುರಿತ ಸಲಹೆ ಸೂಚನೆಗಳನ್ನು ನೀಡಿ ಮತ್ತು ವಾಯು ಮಾಲಿನ್ಯವನ್ನು ತಡೆಗಟ್ಟುವ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವ ನಿರ್ಧಾರವನ್ನು ಕೈಗೊಳ್ಳಲಾಯ್ತು

ಬಳ್ಳಾರಿ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಕಾರ್ಖಾನೆಗಳು ಹೆಚ್ಚಾಗಿರುವುದರಿಂದ ವಾಯು ಮಾಲಿನ್ಯದಿಂದ ಪರಿಸರಕ್ಕೆ ಹಾನಿಯಾಗುತ್ತಿರುವುದು.ಬಳ್ಳಾರಿ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ವಾಯು ಮಾಲಿನ್ಯವು ಹೆಚ್ಚಿದ್ದು ಇದರ ಬಗ್ಗೆ ವಿಚಾರ ಸಂಕಿರಣದಲ್ಲಿ ಚರ್ಚಿಸಿದ್ದು.

ಮುಂದಿನ ಜುಲೈ ಅಥವಾ ಆಗಸ್ಟ್ ತಿಂಗಳಲ್ಲಿ ಬಳ್ಳಾರಿಯಲ್ಲಿ ಇದೇ ರೀತಿಯ ವಿಚಾರ ಸಂಕೀರ್ಣವನ್ನು ನಡೆಸಲು ಸಭೆಯು ಅಂಗೀಕರಿಸಿ ಹಾಗೂ ಈ ವಿಚಾರ ಸಂಕಿರಣದಲ್ಲಿ ವಿವಿಧ ರಾಜ್ಯಗಳಿಂದ ಆಗಮಿಸಿದ ಪ್ರತಿನಿಧಿಗಳು ಕೆಲವು ವಾಯು ಮಾಲಿನ್ಯದ ಬಗ್ಗೆ ಚರ್ಚಿಸಿ ಕೆಲವು ವಿಷಯಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರಲು ತೀರ್ಮಾನಿಸಿತು ಎಂದು ಗಾದೆಪ್ಪ ಹೇಳಿದ್ದಾರೆ.

# ನೀರು ಬಿಡಲು ಆಗ್ರಹ



**ಲಕ್ಷ್ಮೇಶ್ವರ,ಜೂ8:** ಪಟ್ಟಣದಲ್ಲಿ ಬುಧವಾರ ಕರ್ನಾಟಕ ರಕ್ಷಣಾ ವೇದಿಕೆಯ ನಾರಾಯಣಗೌಡ ಬಣದ ಕಾರ್ಯಕರ್ತರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ್ ಹೊಗೆ ಸೊಪ್ಪಿನ ತಾಲೂಕ ಘಟಕದ ಅಧ್ಯಕ್ಷ ಲೋಕೇಶ ಸುತಾರ್ ಅವರ ನೇತೃತ್ವದಲ್ಲಿ ಪುರಸಭೆಗೆ ಮುತ್ತಿಗೆ ಹಾಕಿ ನೀರು ಬಿಡುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅಧಿಕಾರಿ ಪರಶುರಾಮ್ ಗುಡದಾರಿಯವರು ತಾಂತ್ರಿಕ ಕಾರಣಗಳಿಂದ ನೀರು ಸರಬರಾಜುವಿನಲ್ಲಿ ಅಡಚಣೆ ಉಂಟಾಗಿದ್ದು ಎಲ್ಲೆಲ್ಲಿ ಅವಶ್ಯಕತೆ ಇದೆಯೋ ಅಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸುವ ಭರವಸೆಯನ್ನು ನೀಡಿದ್ದರು ಅದರಂತೆ ಪುರಸಭೆಯಿಂದ ಟ್ಯಾಂಕರ್ ಗಳ ಮೂಲಕ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

# ಹಂಪಾಪಟ್ಟಣದಲ್ಲಿ ಫಿಟ್ ಇಂಡಿಯಾ ಅಭಿಯಾನ



**ಹಗರಿಬೊಮ್ಮನಹಳ್ಳಿ.ಜೂ.08** ಕೇಂದ್ರ ಸರ್ಕಾರದ ಫಿಟ್ ಇಂಡಿಯಾ ಅಭಿಯಾನ–2026ರ ಅಂಗವಾಗಿ ತಾಲೂಕಿನ ಹಂಪಾಪಟ್ಟಣ ಗ್ರಾಪಂ ವತಿಯಿಂದ ಭಾನುವಾರ ಗ್ರಾಮದಲ್ಲಿ "ಸೈಕಲ್ ಸ್ವಚ್ಛತಾ ರೈಡ್" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.
ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತಾ ಪತ್ರಿ ಯಲ್ಲಪ್ಪ ಚಾಲನೆ ನೀಡಿ ಮಾತನಾಡಿದರು ಆರೋಗ್ಯವೇ ನಿಜವಾದ ಸಂಪತ್ತು. ಯುವಜನರು ಹಾಗೂ ಸಾರ್ವಜನಿಕರು ದೈಹಿಕ ಆರೋಗ್ಯ ಕಾಪಾಡಿಕೊಳ್ಳಲು ಸೈಕಲ್ ಬಳಕೆಯನ್ನು ಹೆಚ್ಚಿಸಬೇಕು. ಜೊತೆಗೆ ಗ್ರಾಮವನ್ನು ಸ್ವಚ್ಛ ಹಾಗೂ ಸುಂದರವಾಗಿಡಲು ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಖಾಜಾ ಬನ್ನಿ, ಕೇಂದ್ರ ಸರ್ಕಾರದ ಫಿಟ್ ಇಂಡಿಯಾ ಅಭಿಯಾನದ ಉದ್ದೇಶ ಜನರಲ್ಲಿ ಆರೋಗ್ಯಕರ ಜೀವನಶೈಲಿ, ದೈಹಿಕ ಸದೃಢತೆ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ. ಸೈಕಲ್ ಬಳಕೆಯಿಂದ ಆರೋಗ್ಯ ಸುಧಾರಣೆಯಾಗುವುದರ ಜೊತೆಗೆ ಪರಿಸರ ಮಾಲಿನ್ಯವೂ ಕಡಿಮೆಯಾಗುತ್ತದೆ ಎಂದು ತಿಳಿಸಿದರು.
ಸೈಕಲ್ ಜಾಥಾವು ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಆರೋಗ್ಯದ ಕುರಿತು ಜನರಲ್ಲಿ ಅರಿವು ಮೂಡಿಸಿತು.

ಕಾರ್ಯಕ್ರಮದಲ್ಲಿ ಗ್ರಾಪಂ ಉಪಾಧ್ಯಕ್ಷ ಟಿ. ಮಂಜುನಾಥ, ಸದಸ್ಯ ಸಿ.ಎಲ್. ಕುಮಾರ, ಬಿಲ್ ಕಲೆಕ್ಟರ್ ಚರಂತೇಶ್, ವಾಟರ್ ಮ್ಯಾನ್ ಸಿ. ನಾಗರಾಜ್, ಉಲವತ್ತಿ ಬಸವರಾಜ್ ಗ್ರಾಮದ ಮುಖಂಡರಾದ ಸುಡುಗಾಡು ಸಿದ್ದರ ಮಹಾಸಭಾ ತಾಲೂಕು ಅಧ್ಯಕ್ಷ ಪತ್ರಿ ಯಲ್ಲಪ್ಪ, ಪ್ರಭು ಗೌಡರ, ಮಡಿವಾಳ ರಾಮಪ್ಪ, ತೀರ್ಥ ಪ್ರಸಾದ್, ಸೀಗೆನಹಳ್ಳಿ ಸಣ್ಣ ಬಾಳಪ್ಪ ಇತರರಿದ್ದರು.

# ಕುಡುತಿನಿ ಭೂ ಸಂತ್ರಸ್ಥರಿಗೆ ನ್ಯಾಯಯುತ ಬೆಲೆಗಾಗಿ ಜೂನ್ 18 ರಂದು ಜಿಲ್ಲೆಯಾದ್ಯಂತ ಬಂದ್



**ಬಳ್ಳಾರಿ, ಜೂ.08:** ಕೈಗಾರಿಕೆಗಳಿಗೆ ರೈತರಿಂದ ಸ್ವಾಧೀನ ಪಡಿಸಿಕೊಂಡ ಜಮೀನಿಗೆ ನ್ಯಾಯಯುತ ಬೆಲೆ ನಿಗಧಿ ಮಾಡಲು ಆಗ್ರಹಿಸಿ ಜೂನ್ 18 ರಂದು ಜಿಲ್ಲೆಯಾದ್ಯಂತ ಸ್ವಯಂ ಪ್ರೇರಿತ ಬಂದ್ ಮಾಡಲು ನಿರ್ಧರಿಸಿದೆಂದು ಕುಡುತಿನಿ ಭೂಸಂತ್ರಸ್ತರ ಹೋರಾಟ ಸಮಿತಿ ಮುಖಂಡ ಯು.ಬಸವರಾಜ್ ಹೇಳಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿದ ಅವರು. ಕನಿಷ್ಟಪಕ್ಷ 30 ಲಕ್ಷ ರೂ ನೀಡಲು ಜಿಲ್ಲಾ ನ್ಯಾಯಾಲಯ ಆದೇಶ ಮಾಡಿದೆ. ಈ ಹಿನ್ನಲೆಯಲ್ಲಿ ಲಕ್ಷ್ಮೀ ಮಿತ್ತಲ್, ಬ್ರಹ್ಮಿಣಿ ಮೊದಲಾದ ಕಾರ್ಖಾನೆಗಳಿಗೆ 5, 8, 12 ಲಕ್ಷ ರೂ ನೀಡಿ ಈ ಹಿಂದೆ ನಿಗಧಿಮಾಡಿದ್ದು ಲೋಪದಿಂದ ಕೂಡಿದೆಂದು ಈ ಹಿಂದೆ ಡಿಸಿಯವರೇ ಹೇಳಿದ್ದರು.

ಈ ಹಿನ್ನಲೆಯಲ್ಲಿ ನ್ಯಾಯಯುತ ಭೂ ಬೆಲೆ ನಿಗಧಿ ಪಡಿಸಿ ಎಂದು ಹಲವು ರೀತಿ ಹೋರಾಟ ನಡೆಸಿದೆ.

ಮೂಲತಃವಾಗಿ ಬಿಜೆಪಿ ಸರ್ಕಾರದಿಂದ ಅನ್ಯಾಯ ನಡೆಯಿತು. ನಂತರ ಬಂದ ಜೆಡಿಎಸ್, ಕಾಂಗ್ರೆಸ್ ಸರ್ಕಾರಗಳು ಸಹ ಅನ್ಯಾಯ ಸರಿಪಡಿಸುವುದಾಗಿ ಹೇಳಿದ್ದರೂ ಮಾಡಲಿಲ್ಲ. ಜೊತೆಗೆ ಈಗ8ನ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ನೀವು ಸಮ್ಮತಿ ಮೇಲೆ ಜಮೀನು ನೀಡಿದ್ದೀರಿ ಎನ್ನುತ್ತಿದ್ದಾರೆ.

ಅದಕ್ಕಾಗಿ ನಮ್ಮ ಸುದೀರ್ಘವಾದ ಹೋರಾಟವನ್ನು ಏಳು ಹಳ್ಳಿಗಳ ರೈತರು ಸೇರಿ ಜೂನ್ 18 ರಂದು ಜಿಲ್ಲೆಯಾದ್ಯಂತ ಸ್ವಯಂ ಪ್ರೇರಿತ ಬಂದ್ ನಡೆಸಲು ನಿರ್ಧರಿಸಿದೆ. ಜನತೆ ಇದಕ್ಕೆ ಸಹಕಾರ ನೀಡಬೇಕು ಎಂದು ಮಾನವಿ ಮಾಡಿದ್ದಾರೆ.

ಎಲ್ಲಾ ಸಂಘ ಸಂಸ್ಥೆಗಳಿಗೂ ಮನವಿ ಮಾಡಿ ಬಂದ್ ನಲ್ಲಿ ಪಾಲ್ಗೊಳ್ಳಲು ಕೋರಲಿದೆಂದು ಹೇಳಿದರು.

ವಶಪಡಿಸಿಕೊಂಡ ಜಮೀನು ಉದ್ದೇಶ ಉಲ್ಲಂಘನೆ ಮಾಡಿ ಜಿಂದಾಲ್ ಗೆ ಹೆಚ್ಚಿನ ಬೆಲೆಗೆ ಕೆಐಎಡಿಬಿ ನೀಡಿದೆ. ಇದು ನಿಯಮಗಳ ಉಲ್ಲಂಘನೆ. ಈ ಜಮೀನಿಗೆ ಹೊಸ ನೋಟಿಫಿಕೇಶನ್ ಮಾಡಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ , ಜೆ.ಸತ್ಯಬಾಬು, ಚೆನ್ನಪ್ಪ, ಜಂಗ್ಲಿಸಾಬ್, ರಮೇಶ್, ಆನಂದ್, ಟಿ.ಜಿ.ವಿಠ್ಠಲ್ , ಹುಸೇನಪ್ಪ ಮೊದಲಾದವರು ಇದ್ದರು.

# ಸರಸ್ವತಿ ಪಿಯು ಕಾಲೇಜ ವಿದ್ಯಾರ್ಥಿಗಳ ಸಾಧನೆ



**ಕುಮಟಾ,ಜೂ.8:** ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವಿವಿಧ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ನಡೆಸಿದ 2026ನೇ ಸಾಲಿನ ಕೆಸಿಇಟಿ ಪರೀಕ್ಷೆಯಲ್ಲಿ ತಾಲೂಕಿನ ವಿಧಾತ್ರಿ ಅಕಾಡೆಮಿ ಹಾಗೂ ಕೊಂಕಣ ಎಜ್ಯುಕೇಶನ್ ಟ್ರಸ್ಟ್ ಸಹಭಾಗಿತ್ವದ ಸರಸ್ವತಿ ಪಿ.ಯು ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡುವ ಮೂಲಕ ಸಂಸ್ಥೆಯ ಶೈಕ್ಷಣಿಕ ಗುಣಮಟ್ಟವನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ಈ ವರ್ಷದ ಫಲಿತಾಂಶದಲ್ಲಿ ಕಾಲೇಜಿನ 18ಕ್ಕೂ ಹೆಚ್ಚು ವಿದ್ಯಾರ್ಥಿಗಳು 5,000 ರ್‍ಯಾಂಕ್‌ನೊಳಗೆ ಹಾಗೂ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು 10,000 ರ್‍ಯಾಂಕ್‌ನೊಳಗೆ ಸ್ಥಾನ ಗಳಿಸಿರುವುದು ವಿಶೇಷವಾಗಿದೆ.

ವಿದ್ಯಾರ್ಥಿಗಳ ಸಾಧನೆಯಲ್ಲಿ ಜೀವನ ನಾಯ್ಕ ಇಂಜಿನಿಯರಿಂಗ್ ವಿಭಾಗದಲ್ಲಿ 2866 ಹಾಗೂ ಪ್ರಾಸ್ಥೆಟಿಕ್ಸ್ ಮತ್ತು ಆರ್ಥೋಟಿಕ್ಸ್‌ಲ್ಲಿ ಪದವಿ ವಿಭಾಗದಲ್ಲಿ 1721ನೇ ರ್‍ಯಾಂಕ್ ಗಳಿಸಿ ಉತ್ತಮ ಸಾಧನೆ ದಾಖಲಿಸಿದ್ದಾರೆ. ದೀಪಿಕಾ ಭಟ್ಟ ಡಿ–ಫಾರ್ಮಾದಲ್ಲಿ 505, ಬಿ.ಎಸ್.ಸಿ ಅಲೈಡ್ ಹೆಲ್ತ್ ಸೈನ್ಸ್ ವಿಭಾಗದಲ್ಲಿ 505, ಬಿಸಿಓ ವಿಭಾಗದಲ್ಲಿ 727 ಹಾಗೂ ಬಿಎಸ್ಸಿ ಕೃಷಿ ವಿಭಾಗದಲ್ಲಿ 1707ನೇ ರ್‍ಯಾಂಕ್ ಗಳಿಸಿದ್ದು, ಕನ್ನಿಕಾ ಭಟ್ ಇಂಜಿನಿಯರಿಂಗ್ ವಿಭಾಗದಲ್ಲಿ 3630 ಹಾಗೂ ಬಿಪಿಓ ವಿಭಾಗದಲ್ಲಿ 1410ನೇ ರ್‍ಯಾಂಕ್ ಗಳಿಸಿದ್ದು ಗಮನಾರ್ಹವಾಗಿದೆ. ದಿಶಾ ಮಂಜುನಾಥ ಶೆಟ್ಟಿ ಡಿ–ಫಾರ್ಮಾ ಮತ್ತು ಬಿಎಸ್ಸಿ ಅಲೈಡ್ ಹೆಲ್ತ್ ಸೈನ್ಸ್ ಎರಡೂ ವಿಭಾಗಗಳಲ್ಲಿ 678ನೇ ರ್‍ಯಾಂಕ್ ಗಳಿಸಿ ವಿಶೇಷ ಸಾಧನೆ ಮಾಡಿದ್ದಾರೆ. ಭೌಮಿಕ್ ಹಬ್ಬು ಇಂಜಿನಿಯರಿಂಗ್ ವಿಭಾಗದಲ್ಲಿ 3132 ಹಾಗೂ ಕಾಮೆಡ್–ಕೆ ಪರೀಕ್ಷೆಯಲ್ಲಿ 2893ನೇ ರ್‍ಯಾಂಕ್ ಪಡೆದಿದ್ದಾರೆ.

ಸ್ನೇಹಾ ಕಿಣಿ ಬಿಪಿಓ ವಿಭಾಗದಲ್ಲಿ 346, ಎಂಇಟಿ ಪರೀಕ್ಷೆಯಲ್ಲಿ 2737 ಹಾಗೂ ಇಂಜಿನಿಯರಿಂಗ್ ವಿಭಾಗದಲ್ಲಿ 3587ನೇ ರ್‍ಯಾಂಕ್‌ಗಳಿಸಿ ಉತ್ತಮ ಸಾಧನೆ ಮಾಡಿದ್ದಾರೆ. ಪೃಥ್ವಿನ್ ಶೆಟ್ಟಿ ಎಂಇಟಿ ಪರೀಕ್ಷೆಯಲ್ಲಿ 446, ಇಂಜಿನಿಯರಿಂಗ್ ವಿಭಾಗದಲ್ಲಿ 6019 ಹಾಗೂ ಕಾಮೆಡ್–ಕೆ ಪರೀಕ್ಷೆಯಲ್ಲಿ 4187ನೇ ರ್‍ಯಾಂಕ್‌ಗಳಿಸಿದ್ದು, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತಮ್ಮ ಸಾಮರ್ಥ್ಯವನ್ನು ತೋರಿಸಿದ್ದಾರೆ. ಶ್ರೀದೇವಿ ಶಿವಾನಂದ ನಾಯಕ ಬಿಎಸ್ಸಿ ಕೃಷಿ ವಿಭಾಗದಲ್ಲಿ 1917ನೇ ರ್‍ಯಾಂಕ್ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.ವಿದ್ಯಾರ್ಥಿಗಳ ಈ ಸಾಧನೆಗೆ ವಿಧಾತ್ರಿ ಅಕಾಡೆಮಿಯ ಸಹಸಂಸ್ಥಾಪಕ ಗುರುರಾಜ ಶೆಟ್ಟಿ, ಸರಸ್ವತಿ ಪಿ.ಯು. ಕಾಲೇಜಿನ ಪ್ರಾಂಶುಪಾಲ ಜಿ.ಎಸ್ ಹೆಗಡೆ ಕಣ್ಣಿ ಹಾಗೂ ಕೊಂಕಣ ಎಜ್ಯುಕೇಶನ್ ಟ್ರಸ್ಟ್ನ ಅಧ್ಯಕ್ಷ ಹಾಗೂ ವಿಶ್ವಸ್ಥರು, ಉಪನ್ಯಾಸಕರು, ಹಾಗೂ ಸಿಬ್ಬಂದಿಗಳು ಶುಭ ಹಾರೈಸಿದ್ದಾರೆ.

## ಸಾರ್ವಜನಿಕರೇ ಭಯಬೇಡ, ನಾವಿದ್ದೇವೆ.ರಾತ್ರಿಪೂರ ಓಣಿ ಓಣಿ ಗಸ್ತು ತಿರುಗಿದ ಪೊಲೀಸ್ ಅಧಿಕಾರಿಗಳು



**ಕೂಡ್ಲಿಗಿ.ಜೂ. 8 :–** ಪಟ್ಟಣದಲ್ಲಿ ಮುಸುಕುಧರಿಸಿದ ಕಳ್ಳರು ಓಡಾಡುತ್ತಿದ್ದಾರೆ ಎನ್ನುವ ವಿಡಿಯೋ ವೈರಲ್ ಆಗಿದ್ದರಿಂದ ಸಾರ್ವಜನಿಕರಲ್ಲಿ ಭಯಹುಟ್ಟಿಸಿದ ವಾತಾವರಣ ನಿರ್ಮಾಣವಾಗಿದ್ದು ಇದನ್ನರಿತ ಕೂಡ್ಲಿಗಿ ಪೊಲೀಸ್ ಉಪ ವಿಭಾಗದ ಡಿವೈಎಸ್ಪಿ ಸೇರಿದಂತೆ ಉಪವಿಭಾಗದ ಸಿಪಿಐ ಹಾಗೂ ಪಿಎಸ್‌ಐಗಳು ರಾತ್ರಿಪೂರ ಓಣಿ ಓಣಿಗಳಲ್ಲಿ ನಡೆದುಕೊಂಡು ರಾತ್ರಿಪೂರ ಗಸ್ತು ನಡೆಸಿದರು.

ಹೊಸಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾನಾಮಡುಗಿನಲ್ಲಿ ಎರಡು –ಮೂರು ಮನೆಗಳು ಕಳ್ಳತನವಾಗಿವೆ ಎನ್ನುವ ಸುದ್ದಿ ಹರಡಿತ್ತು ಆದರೆ ಇದರ ಕುರಿತಂತೆ ಯಾವುದೇ ಪ್ರಕರಣ ದಾಖಲಾಗಿರಲಿಲ್ಲ ಈ ಸುದ್ದಿಯ ಬೆನ್ನಲ್ಲೇ ಕೂಡ್ಲಿಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದಲ್ಲಿರುವ ಮನೆಗಳ ಹತ್ತಿರ ಮುಖಕ್ಕೆ ಮುಸುಕು ಧರಿಸಿಕೊಂಡ ವ್ಯಕ್ತಿಗಳು ಸುತ್ತಾಡುತ್ತಿದ್ದಾರೆ ಎನ್ನುವ ಕೆಲವು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆ ಪಟ್ಟಣದಲ್ಲಿ ವಿಂಡ್ ಫ್ಯಾನ್ ಹಾಗೂ ಸೋಲಾರ್ ಕಂಪನಿಯಲ್ಲಿ ಕೆಲಸ ಮಾಡುವ ಅಂತಾರಾಜ್ಯ ಕೂಲಿ ಕಾರ್ಮಿಕರಿರಬಹುದು ಎಂದು ಪೊಲೀಸರು ಅಂದಾಜಿಸುವ ಮೂಲಕ ಕಳ್ಳ ಕಾಕರರ ಭಯ ಹೆಚ್ಚಾಗುತ್ತಿದ್ದಂತೆ ಕಂಡು ಬರುತ್ತಿರುವುದನ್ನ ಕಂಡ ಪೊಲೀಸರು ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶ ದೊಡ್ಡಮನಿ ನೇತೃತ್ವದಲ್ಲಿಕೂಡ್ಲಿಗಿ, ಕೊಟ್ಟೂರು ಹಾಗೂ ಹಗರಿಬೊಮ್ಮನಹಳ್ಳಿ ಸಿಪಿಐಗಳು ಮತ್ತು ಕೂಡ್ಲಿಗಿ, ಗುಡೇಕೋಟೆ, ಹೊಸಹಳ್ಳಿ, ಕೊಟ್ಟೂರು, ಹಗರಿಬೊಮ್ಮನಹಳ್ಳಿ ಹಾಗೂ ಮರಿಯಮ್ಮನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಪಿಎಸ್‌ಐಗಳು ಕೂಡ್ಲಿಗಿ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ ಸೇರಿದಂತೆ ಪಟ್ಟಣದ ಓಣಿ ಓಣಿಗಳಲ್ಲಿ ನಡೆದುಕೊಂಡು ಓಡಾಡುವ ಮೂಲಕ ನಿಮ್ಮ ಜೊತೆ ನಾವಿದ್ದೇವೆ ಭಯಬೇಡ ಎಂದು ಸಾರ್ವಜನಿಕರಲ್ಲಿ ಆತ್ಮಸ್ಥೈರ್ಯ ತುಂಬುವ ಮೂಲಕ

ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಮತ್ತು ಸಾರ್ವಜನಿಕರಲ್ಲಿ ಸುರಕ್ಷತಾ ಭಾವನೆಯನ್ನು ಮೂಡಿಸಲು ಪೊಲೀಸರು ಮಂದಾಗಿದ್ದರು.

## ಆರೋಗ್ಯಕರ ಜೀನವ ಶೈಲಿ ಕುರಿತು ಅರಿವು ಮೂಡಿಸುವುದು "ಸೈಕಲ್ ಸವಾಡ್ ಸ್ವಚ್ಛತಾ ಅಭಿಯಾನ ಮುಖ್ಯ ಉದ್ದೇಶ: ಎಂ.ಉಮೇಶ್



**ಹೊಸಪೇಟೆ.ಜೂ.8** ಸಾರ್ವಜನಿಕರಲ್ಲಿ ಸ್ವಚ್ಛತೆ ಹಾಗೂ ಆರೋಗ್ಯಕರ ಜೀವನ ಶೈಲಿಯ ಮಹತ್ವ ಕುರಿತು ಅರಿವು ಮೂಡಿಸುವುದು ಸೈಕಲ್ ಸವಾಡ್ ಸ್ವಚ್ಛತಾ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾಧಿಕಾರಿ ಎಂ.ಉಮೇಶ್ ಹೇಳಿದರು.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ, ಜಿಲ್ಲಾ ಪಂಚಾಯತ್ ವಿಜಯನಗರ ಹಾಗೂ ತಾಲೂಕು ಪಂಚಾಯತ್ ಹೊಸಪೇಟೆ ಇವರ ಸಂಯುಕ್ತಾಶ್ರಯದಲ್ಲಿ 'ಫಿಟ್ ಇಂಡಿಯಾ ಆಂದೋಲನ ಹಾಗೂ ವಿಶ್ವ ಬೈಸಿಕಲ್ ದಿನಾಚರಣೆ–2026 ಅಂಗವಾಗಿ "ಸೈಕಲ್ ಸವಾಡ್ ಸ್ವಚ್ಛತಾ ಕಾರ್ಯ" ಅಭಿಯಾನಕ್ಕೆ ಸ್ಥಳೀಯ ತಾಲೂಕು ಪಂಚಾಯಿತಿ ಕಛೇರಿ ಅವರಣದಲ್ಲಿ ಭಾನುವಾರ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮೀಣ ಮತ್ತು ನಗರ ಪ್ರದೇಶದ ಜನರಿಗೆ ಉತ್ತಮ ಆರೋಗ್ಯ, ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆ ಕುರಿತು ಅರಿವು ಮೂಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದ್ದು. ಈ ನಿಟ್ಟಿನಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ನಾವು ಸೇವಿಸುವ ಆಹಾರ ಹಾಗೂ ಕುಡಿಯುವ ನೀರು ಅಶುಚಿಯಾಗಿದ್ದಲ್ಲಿ ದೈಹಿಕ ಆರೋಗ್ಯದ ಮೇಲೆ ಹೆಚ್ಚು ಪರಿಣಾಮ ಬೀರಿ, ದೇಹದ ಆರೋಗ್ಯ ಅಸಮತೋಲನಕ್ಕೆ ಕಾರಣ ವಾಗುತ್ತದೆ. ಈ ಹಿನ್ನಲೆಯಲ್ಲಿ ಪ್ರತಿಯೊಬ್ಬರ ಜೀವನ ಶೈಲಿಯಲ್ಲಿ ಬದಲಾವಣೆ ತರಲು ದೈಹಿಕ ಆರೋಗ್ಯದ ಹೆಚ್ಚು ಒತ್ತು ನೀಡಬೇಕಾಗಿದೆ.

ಗ್ರಾಮೀಣ ಹಾಗೂ ನಗರ ಭಾಗದಲ್ಲಿ ಬಯಲು ಶೌಚ, ಮಲಮೂತ್ರ ವಿಸರ್ಜನೆ ಮಾಡುವುದರಿಂದ ವಿವಿಧ ಸಾಂಕ್ರಾಮಿಕ ರೋಗ ಬಾಧೆಗೆ ತುತ್ತಾಗಿ, ದೇಹದ ಆರೋಗ್ಯದ ಮೇಲೆ ರಕ್ತಹೀನತೆ, ವಾಂತಿ, ಪೋಲಿಯೋ, ಕಾಲರಾ, ವಿವಿಧ ಸಾಂಕ್ರಾಮಿಕ ಸೋಂಕಿಗೆ ತುತ್ತಾಗಬೇಕಾಗುತ್ತದೆ. ಈ ಉದ್ದೇಶದಿಂದ ನಮ್ಮ ಸುತ್ತಮುತ್ತಲಿನ ಪರಿಸರ ಸಂರಕ್ಷಣೆ ಮಾಡುವುದು ನಮ್ಮ ಆದ್ಯ ಕರ್ತವ್ಯವಾಗಿದ್ದು, ಪ್ರತಿಯೊಬ್ಬರು ದೇಹದ ಆರೋಗ್ಯದ ಹಿತದೃಷ್ಟಿಯಿಂದ ಬಯಲು ಮಲ ಮೂತ್ರ ವಿಸರ್ಜನೆ ಮಾಡದೇ, ಶೌಚಾಲಯ ಬಳಕೆ ಮಾಡುವ ಮೂಲಕ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಬೇಕು, ಹಾಗೂ ಪ್ರತಿಯೊಬ್ಬರು ಸುಂದರ ಸ್ವಚ್ಚ ನಗರ ನಿರ್ಮಾಣ ಮಾಡಲು ಕೈ ಜೋಡಿಸಬೇಕು, ಉತ್ತಮ ಆರೋಗ್ಯ ಸ್ವಚ್ಚ ಪರಿಸರದಿಂದ ಮಾತ್ರ ಸ್ವಚ್ಚ ನಗರ ನಿರ್ಮಾಣ ಸಾಧ್ಯ ಎಂಬುದನ್ನು ಅರಿತು ಜಾಗೃತರಾಗಬೇಕು ಎಂದರು.

ಶುದ್ಧ ಆಹಾರ ಸೇವನೆ ಹಾಗೂ ಕುಡಿಯುವ ನೀರು ಸೇವನೆ ಹಾಗೂ ದೈಹಿಕ ಆರೋಗ್ಯ, ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಸೈಕಲ್ ಜಾಥಾವನ್ನು ಹಮ್ಮಿಕೊಂಡಿದ್ದು, ಕೇಂದ್ರ ಸರ್ಕಾರದ ಫಿಟ್ ಇಂಡಿಯಾ ಚಳವಳಿಯು ಪ್ರತಿಯೊಬ್ಬ ನಾಗರಿಕರ ಜೀವನದಲ್ಲಿ ದೈಹಿಕ ಫಿಟ್ನೆಸ್ಸ್ನು ಅವಿಭಾಜ್ಯ ಭಾಗವನ್ನಾಗಿಸುವ ಗುರಿಯನ್ನು ಹೊಂದಿದೆ. ಅದರ ಭಾಗವಾಗಿ ದೇಶಾದ್ಯಂತ ನಡೆಯುತ್ತಿರುವ "ಸಂಡೇಸ್ ಆನ್ ಸೈಕಲ್" ಅಭಿಯಾನವು ಈಗಾಗಲೇ 7 ಕೋಟಿಗೂ ಅಧಿಕ ಜನರನ್ನು ತಲುಪಿದ್ದು. ಸೈಕಲ್ ಚಾಲನಾ ಅಭಿಯಾನವು ನಮ್ಮ ಆರೋಗ್ಯ ವೃದ್ಧಿಸುವುದರ ಜೊತೆಗೆ ಪರಿಸರ ಸಂರಕ್ಷಣೆಯಲ್ಲಿಯೂ ಮಹತ್ವದ ಪಾತ್ರ ವಹಿಸುತ್ತದೆ. ಸ್ವಚ್ಛತಾ ಭಾರತದ ಪ್ರತಿಜ್ಞೆಯೊಂದಿಗೆ ಫಿಟ್ ಇಂಡಿಯಾ ಆಂದೋಲನವು ಆರೋಗ್ಯಕರ ಭಾರತ ನಿರ್ಮಾಣದತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಂಡಿ ಆಲಂಭಾಷಾ ಮಾತನಾಡಿ, ಇಂದಿನ ಆಧುನಿಕ ಜೀವನಶೈಲಿಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಅವುಗಳನ್ನು ತಡೆಗಟ್ಟಲು ಯೋಗ, ಕ್ರೀಡೆ, ಸೈಕ್ಲಿಂಗ್, ವಾಕಿಂಗ್ ಹಾಗೂ ಇತರೆ ದೈಹಿಕ ಚಟುವಟಿಕೆಗಳನ್ನು ಜೀವನದ ಭಾಗವಾಗಿಸಿಕೊಳ್ಳಬೇಕು. ಫಿಟ್ ಇಂಡಿಯಾ ಆಂದೋಲನವು ಆರೋಗ್ಯಕರ ಹಾಗೂ ಚೈತನ್ಯಮಯ ಸಮಾಜ ನಿರ್ಮಾಣಕ್ಕೆ ಪೂರಕವಾಗಿದೆ ಎಂದು ತಿಳಿಸಿದರು.

ಸದರಿ ಅಭಿಯಾನದ ಸೈಕಲ್ ಜಾಥಾವು ಸ್ಥಳೀಯ ತಾ.ಪಂ ಕಚೇರಿ ಆವರಣದಿಂದ ಪ್ರಾರಂಭವಾಗಿ, ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಜಿಲ್ಲಾ ಪಂಚಾಯತ್ ಕಚೇರಿವರೆಗೆ ಸಾಗಿತು. ಬಳಿಕ ಭಾಗವಹಿಸಿದ ಸೈಕ್ಲಿಸ್ಟಳು ಸರಪಳಿ ರಚಿಸಿ ಫಿಟ್ ಇಂಡಿಯಾ ಹಾಗೂ ಸ್ವಚ್ಛತಾ ಜಾಗೃತಿ ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಅಭಿಯಾನದಲ್ಲಿ ತಾ.ಪಂ.ವ್ಯವಸ್ಥಾಪಕ ಉಮಾಕಾಳೆ, ಎನ್.ಆರ್.ಎಲ್.ಎಂ ಯೋಜನೆಯ ಟಿಪಿಎಂ ಕೊಟ್ರೇಶ್, ಸ್ವಚ್ಛ ಭಾರತ್ ಮಿಷನ್ ಯೋಜನೆಯ ಜಿಲ್ಲಾ ಸಮಾಲೋಚಕ ಹನುಮಂತ ನಾಯಕ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಪಂಚಾಯತಿ ಸಿಬ್ಬಂದಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು, ಸ್ವಯಂ ಸೇವಕರು, ಯುವಕರು ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ರಸ್ತೆಯಲ್ಲಿಬಿದ್ದ ಗುಂಡಿಗೆ ಮಣ್ಣು ಹಾಕಿ ರಸ್ತೆ ಸಂಚಾರ ಸುಗಮಗೊಳಿಸಿದ ಜುಮ್ಮೊಬನಹಳ್ಳಿ ಗೆಳೆಯರ ಬಳಗ,



**ಕೂಡ್ಲಿಗಿ. ಜೂ.8 :–** ರಸ್ತೆ ಕಳಪೆಯೋ, ಭಾರಿ ವಾಹನಗಳ ಸಂಚಾರವೋ ತಿಳಿಯದಾಗಿದ್ದು ಹೊಸಹಳ್ಳಿ ಜುಮ್ಮೊಬನಹಳ್ಳಿ ರಸ್ತೆ ಮಾತ್ರ ರಸ್ತೆ ಮಧ್ಯ ತಗ್ಗು ಗುಂಡಿಯಿಂದ ಕೂಡಿದ್ದು ದಿನಾಲೂ ಸಂಚಾರ ಮಾಡುವ ಬೈಕ್ ಸವಾರರು ಆಕಸ್ಮಿಕ ಬಿದ್ದು ಗಾಯಗೊಂಡಿದ್ದಾರೆ ಅಲ್ಲದೆ ಜನವರಿ ತಿಂಗಳಲ್ಲಿ ರಸ್ತೆಗೆ ಪ್ಯಾಚ್ ವರ್ಕ್ ಮಾಡಲಾಯಿತ್ತಾದರೂ ರಸ್ತೆ ಹದಗೆಟ್ಟು ಗುಂಡಿಬಿದ್ದಿದ್ದನ್ನು ಕಂಡ ಜುಮ್ಮೊಬನಹಳ್ಳಿ ಶ್ರೀ ಮಲಿಯಮ್ಮ ದೇವಿ ಗೆಳೆಯರ ಬಳಗ ನಿನ್ನೆಯಿಂದ ಟ್ರಾಕ್ಟರ್ ನಲ್ಲಿ ಮಣ್ಣು ತಂದು ಸಾರ್ವಜನಿಕರ ಹಾಗೂ ಬೈಕ್ ಸವಾರರ ಸುಗಮ ಸಂಚಾರಕ್ಕೆ ಸ್ವ ಕಾರ್ಯದಲ್ಲಿ ತೊಡಗಿದ್ದಾರೆ.

ಈ ರಸ್ತೆ ಕಾಮಗಾರಿಯು 2018–19ನೇ ಸಾಲಿನ ಡಿಎಂಎಫ್ ಯೋಜನೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಅನುಷ್ಠಾನಗೊಂಡಂತೆ ಒಂದು ಕೋಟಿ ರೂ ವೆಚ್ಚದ ಹೊಸಹಳ್ಳಿಯಿಂದ ಜುಮ್ಮೋಬನಹಳ್ಳಿ ರಸ್ತೆ 2.984ರವರೆಗೆ ಅಭಿವೃದ್ಧಿಪಡಿಸುವ ಕಾಮಗಾರಿಯ ರಸ್ತೆಯಾಗಿದ್ದು ಇತ್ತೀಚಿಗೆ ಜನವರಿ ಸಂದರ್ಭದಲ್ಲಿ ಸಹ ಈ ರಸ್ತೆಗೆ ಪ್ಯಾಚ್ ವರ್ಕ್ ಮಾಡಿ ಐದಾರು ತಿಂಗಳು ಕಳೆದಿಲ್ಲ ಆಗಲೇ ರಸ್ತೆಯಲ್ಲಿ ತಗ್ಗು ಗುಂಡಿಗಳು ಬಿದ್ದಿದ್ದು ರಸ್ತೆಯ ಸಂಚಾರಕ್ಕೆ ಬೈಕ್ ಸವಾರರು ತ್ರಾಸ್ ಪಡುತ್ತಿದ್ದೂ ನಿಯಂತ್ರಣ ತಪ್ಪಿ ಬಿದ್ದು ಗಾಯಸಹ ಆಗಿವೆ ಆದರೆ ರಸ್ತೆ ಇಷ್ಟು ಬೇಗ ಹಾಳಾಗಲು ಕಾಮಗಾರಿ ಕಳಪೆಯೋ, ಭಾರಿ ವಾಹನಗಳ ಸಂಚಾರವೋ ಎಂದು ತಿಳಿಯದಾಗಿದೆ ಎನ್ನುತ್ತಾರೆ ಅಲ್ಲಿನ ಜನತೆ ಸಾರ್ವಜನಿಕರ ಸಂಚಾರಕ್ಕೆ ಅನುವೂ ಆಗಲೆಂದು ಅರಿತ ಜುಮ್ಮೋಬನಹಳ್ಳಿ ಗ್ರಾಮದ ಮಲಿಯಮ್ಮದೇವಿ ಗೆಳೆಯರ ಬಳಗದ ನಿನ್ನೆಯಿಂದ ಜುಮ್ಮೋಬನಹಳ್ಳಿ ಸಮೀಪದ ಅರಣ್ಯದ ಹತ್ತಿರ ಮಡ್ರಳ್ಳಿ ಚೌಡಮ್ಮ ದೇವಸ್ಥಾನ ದಿಂದ ಸುಮಾರು 1ಕಿಮೀ ರಸ್ತೆ ದೊಡ್ಡ ದೊಡ್ಡ ತಂಗು(ಕುಣಿ) ಬಿದ್ದಿದ್ದು ಸ್ವಯಂ ಪ್ರೇರಿತರಾಗಿ ಮುಂದಾಗಿ ಟ್ರಾಕ್ಟರ್ ನಲ್ಲಿ ಮಣ್ಣು ತಂದು ರಸ್ತೆಗೆ ಬಿದ್ದ ತಗ್ಗುಗುಂಡಿಗಳನ್ನು ಮುಚ್ಚಲು ಮುಂದಾಗಿದ್ದಾರೆ ಎಂದು ಜುಮ್ಮೊಬನಹಳ್ಳಿ ಗ್ರಾಮಪಂಚಾಯಿತಿ ಮಾಜಿ ಸದಸ್ಯ ಜೆ ಮ್ಯಾಸರಹಟ್ಟಿ ಗುಂಡಪ್ಪ ಪತ್ರಿಕೆಗೆ ತಿಳಿಸುತ್ತಾ ಸಾಮಾಜಿಕ ಕಳಕಳಿ ಇಟ್ಟುಕೊಂಡು ರಸ್ತೆ ಗುಂಡಿ ಮುಚ್ಚುವ ಕಾರ್ಯದಲ್ಲಿ ತೊಡಗಿದ ಗೆಳೆಯರ ಬಳಗಕ್ಕೆ ಅಭಿನಂದಿಸಿ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

## ಕಾಶಪ್ಪ ನವರಿಗೆ ಸಚಿವ ಸ್ಥಾನಕ್ಕೆ ಒತ್ತಾಯಿಸಿ ಹಂಪಿಯಲ್ಲಿ ಅಭಿಮಾನಿಗಳಿಂದ ವಿಶೇಷ ಪೂಜೆ

**ಹೊಸಪೇಟೆ. ಜೂ.8–** ಬಾಗಲಕೋಟೆ ಜಿಲ್ಲೆ ಹುನಗುಂದ ಕ್ಷೇತ್ರದ ಶಾಸಕ ಡಾ.ವಿಜಯಾನಂದ ಕಾಶಪ್ಪ ನವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಅವರ ಅಭಿಮಾನಿಗಳು ಹಾಗೂ ವೀರಶೈವ ಸಮಾಜದ ಬಂಧುಗಳು ಹಂಪಿಯ ಶ್ರೀ ವಿರೂಪಾಕ್ಷೇಶ್ವರ ದೇವಸ್ಥಾನದಲ್ಲಿಂದು ವಿಶೇಷ ಪೂಜೆ ಸಲ್ಲಿಸಿದರು.



ವೀರಶೈವ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ವೀರಶೈವ ಸಮಾಜದ ಹಿರಿಯ ಮುಖಂಡರು ಆಗಿರುವ ಹುನಗುಂದ ಶಾಸಕ ಡಾ.ವಿಜಯಾನಂದ ಕಾಶಪ್ಪ ನವರಿಗೆ ಎರಡನೇ ಕಂತಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ, ಹಂಪಿ ಶ್ರೀ ವಿರೂಪಾಕ್ಷೇಶ್ವರ ದೇವಸ್ಥಾನದಲ್ಲಿ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಿ ದೇವರಲ್ಲಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವೀರಶೈವ ಸಮಾಜದ ಮುಖಂಡ ವಿರೇಶ್ವರ ಎಂ.ಬಿ, ವಿಜಯಾನಂದ ಕಾಶಪ್ಪ ನವರು ವೀರಶೈವ ಸಮಾಜದ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ ರಾಗಿದ್ದಾರೆ.ಅಲ್ಲದೆ ಪಕ್ಷಕ್ಕೆ ಸಾಕಷ್ಟು ದುಡಿದಿದ್ದಾರೆ. ಕ್ಷೇತ್ರದ ಹಾಗೂ ಸಮಾಜದ ಅಭಿವೃದ್ಧಿ ದೃಷ್ಟಿಯಿಂದ ಅವರಿಗೆ ಸಚಿವ ಸ್ಥಾನ ನೀಡಿದರೆ ಪಕ್ಷಕ್ಕೂ ಹಾಗೂ ಸಮಾಜಕ್ಕೂ ಆನೆ ಬಲ ಬಂದಂತಾಗುತ್ತದೆ. ಈ ಹಿನ್ನಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಕಾಶಪ್ಪ ನವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕಾಶಪ್ಪನವರ ಅಭಿಮಾನಿಗಳಾದ ಮಂಜುನಾಥ ನಿಟ್ಟಳ್ಳಿ, ನಾಗರಾಜ ಕುಕನಪಳ್ಳಿ, ಮಲ್ಲಿಕಾರ್ಜುರ, ವೀರಭದ್ರಪ್ಪ, ಶರಣಪ್ಪ ತಟ್ಟಿ, ಕೊಟ್ಟೂರೇಶ್ವರ, ರಾಜು, ಚಂದ್ರಶೇಖರ್, ವಿಕ್ರಂ, ಶ್ರೀಕಾಂತ, ಮನ್ನೂರು ಇದ್ದರು.

## ಹೆಚ್.ಆರ್.ಗವಿಯಪ್ಪ ಗೆ ಸಚಿವ ಸ್ಥಾನಕ್ಕೆ ಪ್ರಾರ್ಥಿಸಿ ಹಂಪಿಯಲ್ಲಿ 201 ತೆಂಗಿನಕಾಯಿ ಒಡೆದ ಕಾರ್ಯಕರ್ತರು

**ಹೊಸಪೇಟೆ. ಜೂ.8** ಸ್ಥಳೀಯ ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಆರ್.ಗವಿಯಪ್ಪ ಅವರಿಗೆ ಸಚಿವ ಸ್ಥಾನ ಸಿಗಲಿ ಎಂದು ಪ್ರಾರ್ಥಿಸಿ ಕಾಂಗ್ರೆಸ್ ಕಾರ್ಯಕರ್ತರು ಹಂಪಿಯ ಶ್ರೀ ವಿರೂಪಾಕ್ಷೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಿ, 201 ತೆಂಗಿನಕಾಯಿ ಒಡೆದು ತಮ್ಮ ಹರಕೆ ತೀರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ಸೋಮಶೇಖರ್ ಬಣ್ಣದಮನೆ, ನೂತನ ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಸ್ಥಳೀಯ ಶಾಸಕ ಹೆಚ್.ಆರ್. ಗವಿಯಪ್ಪ ಅವರಿಗೆ ಎರಡನೇ ಕಂತಿನ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು.
ಈ ಸಂದರ್ಭದಲ್ಲಿ ಮುಖಂಡರಾದ ರಾಮಾಂಜಿನಿ, ಹೆಚ್.ಮಹೇಶ್ ಸೇರಿದಂತೆ ಮುಖಂಡರು, ಕಾರ್ಯಕರ್ತರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE